ಸಂಪುಟ : 10 ಸಂಚಿಕೆ: 231 ಪುಟ : 4+2 ಬೆಲೆ: 3.00 ಶನಿವಾರ ಅಕ್ಟೋಬರ್ 25 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 231 Pages : 4+2 Price : 3.00 Saturday October 25 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಹೆಸರಿನಲ್ಲಿ ಬದಲಾವಣೆ

ನಾನು ಶ್ರೀಮತಿ ತಂಜೀನ ಸರಪರಾಜ ಕಣವಿ, ಸಾ॥ ಗದಗ ತಾ/ಜಿ : ಗದಗ ಈ ಮೂಲಕ ದೃಢೀಕರಿಸುವುದೇನೆಂದರೆ, Tanzeen Pachapuri D/o. Rafiq Ahmed Pachapuri ಅಂತಾ ದಾಖಲ ಇರುತ್ತದೆ ಮತ್ತು ಮದುವೆಯಾದ ನಂತರ ನನ್ನ ಹೆಸರು ಗಂಡನ ಮನೆಯ ದಾಖಲೆಯಲ್ಲಿ Tanzeen Sarparaj Kanavi ಅಂತಾ ದಾಖಲ ಇರುತ್ತದೆ. ಈ ಮೇಲಿನ ಎರಡೂ ಹೆಸರುಗಳು ಒಬ್ಬ ವ್ಯಕ್ತಿಗೆ ಅಂದರೆ ನನಗೆ ಸಂಬಂಧಿಸಿದ್ದು ಇರುತ್ತದೆ. ಇನ್ನು ಮುಂದೆ ನಾನು Tanzeen Sarparaj Kanavi ಈ ಹೆಸರಿನಲ್ಲಿ ಮುಂದುವರೆಯುತ್ತೇನೆ ಅಂತಾ ವಕೀಲರು, ಮತ್ತು ನೋಟರಿ ಶ್ರೀ ಎಂ. ಎಂ. ಹಿರೇಮಠ ಅವರ ಮುಂದೆ ದಿನಾಂಕ 23-10-2025 ರಂದು ದೃಢೀಕರಿಸುತ್ತೇನೆ.

## ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಬೀದಿ ಬದಿ ವ್ಯಾಪಾರಸ್ಥರಿಗೆ ಸಂಬಂಧಿಸಿದಂತೆ ಪಿ.ಎಮ್ ಸ್ವನಿಧಿ ಆತ್ಮನಿರ್ಭರ ಯೋಜನೆಯಡಿಯಲ್ಲಿ ಬೀದಿ ಬದಿ ವ್ಯಾಪಾರಸ್ಥರಿಗೆ ಸ್ಥಳೀಯ ಬ್ಯಾಂಕ್ ಮೂಲಕ ಸಾಲದ ಸೌಲಭ್ಯವನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ▶▶3ನೇ ಪುಟಕ್ಕೆ

### ಸರಕಾರದ ಆದೇಶ ದಿಕ್ಕರಿಸಿ ಅಪಮಾನ ಮಾಡಿದ್ದ ತಹಸೀಲ್ದಾರ್..! ಪಂಚಮಸಾಲಿ ಸಮಾಜದಿಂದ ಪ್ರತಿಭಟನೆ

# ನಿರ್ಲಕ್ಷ್ಯ ತೋರಿದ ತಹಸೀಲ್ದಾರ್‌ಗೆ ಕಡ್ಡಾಯ ರಜೆ.!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸ್ವಾತಂತ್ರ್ಯ ಹೋರಾಟಗಾರ್ತಿ ವೀರರಾಣಿ ಕಿತ್ತೂರ ಚೆನ್ನಮ್ಮಳ ಜಯಂತ್ಯುತ್ಸವವನ್ನು ನಿರ್ಲಕ್ಷಿಸಿ ಅಪಮಾನ ಮಾಡಿದ ತಹಸೀಲ್ದಾರರನ್ನು ಕೂಡಲೇ ಅಮಾನತ್ತು ಮಾಡಬೇಕೆಂದು ಗುರುವಾರ ಲಕ್ಷ್ಮೇಶ್ವರ ತಹಸೀಲ್ದಾರ ಕಚೇರಿಯ ಎದುರು ಪಂಚಮಸಾಲಿ ಸಮಾಜ ಬಾಂಧವರು ವಿವಿಧ ಸಂಘಟನೆ ಮತ್ತು ಸಮಾಜದವರೊಡಗೂಡಿ ಆರಂಭಿಸಿದ್ದ ಪ್ರತಿಭಟನೆ, ಅಹೋರಾತ್ರಿ ಧರಣಿ ಶುಕ್ರವಾರ ಜಿಲ್ಲಾಧಿಕಾರಿಗಳ ಮಧ್ಯಸ್ಥಿಕೆ, ಭರವಸೆಗಳೊಂದಿಗೆ ಮುಕ್ತಾಯಗೊಂಡಿತು.

ತಹಸೀಲ್ದಾರರು ಚೆನ್ನಮ್ಮನ ಜಯಂತಿ ಆಚರಣೆಯ ಪೂರ್ವಭಾವಿ ಸಭೆ ಮಾಡದೆ, ಸ್ಥಳೀಯವಾಗಿಯೇ ಇದ್ದರೂ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳದೇ ಸರ್ಕಾರದ ಆದೇಶ ಧಿಕ್ಕರಿಸಿ ಅಪಮಾನ ಮಾಡಿದ್ದಾರೆ. ಕೂಡಲೇ ಅವರನ್ನು ಅಮಾನತ್ತು ಮಾಡಬೇಕು ಎಂದು ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು. ಕರ್ನಾಟಕ ರಕ್ಷಣಾ ವೇದಿಕೆ, ಕರವೇ ಸ್ವಾಭಿಮಾನಿ ಸೇನೆ, ಶ್ರೀರಾಮಸೇನೆ, ಸಂಗೊಳ್ಳಿ ರಾಯಣ್ಣ ವೇದಿಕೆ ಸೇರಿ ವಿವಿಧ ಸಮಾಜ ಮತ್ತು ಸಂಘಟನೆಯವರು, ಮಹಿಳೆಯರೂ ಸಾಥ್ ನೀಡಿದರು.

ಶುಕ್ರವಾರ ಬೆಳಿಗ್ಗೆ ಧರಣಿ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ ಅವರು ನಡೆದ ಘಟನೆಯ ಸಂಪೂರ್ಣ ಮಾಹಿತಿ ಪಡೆದರು. ಈ ವೇಳೆ ಮತನಾಡಿದ



ಅವರು ಸ್ವಾತಂತ್ರ್ಯ ಹೋರಾಟಗಾರ್ತಿ, ಭಾರತದ ಪ್ರಥಮ ಸ್ವಾತಂತ್ರ್ಯ ಹೋರಾಟದ ಪೂರ್ವದಲ್ಲಿಯೇ (1824) ಬ್ರಿಟೀಷರ ವಿರುದ್ಧ ಹೋರಾಡಿ ಸ್ವತಂತ್ರ ಭಾರತದ ಬೆಳ್ಳಿಚುಕ್ಕಿ ಎನಿಸಿಕೊಂಡಿದ್ದಾರೆ. ಚೆನ್ನಮ್ಮಾಜಿ ಯಾವುದೇ ಒಂದು ಜಾತಿ ಜನಾಂಗಕ್ಕೆ ಸೀಮಿತವಲ್ಲ. ಈ ನಿಟ್ಟಿನಲ್ಲಿ ತಹಸೀಲ್ದಾರರ ನಿರ್ಲಕ್ಷ್ಯ ಮೇಲ್ನೋಟಕ್ಕೆ ಸಾಬೀತಾಗಿದೆ. ಅವರ ವಿರುದ್ಧ ಶಿಸ್ತು ಕ್ರಮಕ್ಕೆ ಬರೆಯಲಾಗುವುದು ಮತ್ತು ಕಡ್ಡಾಯ ರಜೆ-ಯ ಮೇಲೆ ಕಳುಹಿಸಲಾಗಿದೆ. ಶಿರಹಟ್ಟಿ ತಹಸೀಲ್ದಾರರಿಗೆ ಹೆಚ್ಚುವರಿ ಪ್ರಭಾರ ವಹಿಸಲಾಗುವುದು. ತಹಸೀಲ್ದಾರರಿಂದಾದ ನಿರ್ಲಕ್ಷ್ಯಕ್ಕೆ ನಾನು ಕ್ಷಮೆ ಕೇಳುತ್ತಿದ್ದು, ಧರಣಿ ಕೈಬಿಡಿ ಎಂದು ವಿನಂತಿಸಿದರಲ್ಲದೆ, ಸಮಾಜ ಬಾಂಧವರು ತಾಲೂಕು ಮಟ್ಟದ ಚೆನ್ನಮ್ಮ ಜಯಂತಿ ಆಚರಣೆಗೆ ದಿನಾಂಕ ನಿಗದಿಪಡಿಸಿದರೆ ತಪ್ಪದೇ ನಾನೂ ಪಾಲ್ಗೊಳ್ಳುವೆ ಎಂದರು.

ಜಿಲ್ಲಾಧಿಕಾರಿಗಳೇ ಕ್ಷಮೆ ಕೇಳಿದ್ದರಿಂದ ಮತ್ತು ತಹಸೀಲ್ದಾರರ ವಿರುದ್ಧ ಕ್ರಮಕ್ಕೆ ಮುಂದಾಗಿದ್ದರಿಂದ ಸಮಧಾನಗೊಂಡ ಪ್ರತಿಭಟನಾಕಾರರು ಪರಸ್ಪರ ಮಾತುಕತೆ ನಡೆಸಿ ಪ್ರತಿಭಟನೆಯಿಂದ ಹಿಂದೆ ಸರಿಯುವ ನಿರ್ಧಾರ ಕೈಗೊಂಡರು. ಈ ವೇಳೆ ಮಾತನಾಡಿದ ಮಂಜುನಾಥ ಮಾಗಡಿ, ಇನ್ನು ಮುಂದೆ ಯಾವುದೇ ಮಹಾನ್ ನಾಯಕರ ಜಯಂತಿ ಆಚರಣೆ ವೇಳೆಯೂ ಈ ರೀತಿ ಆಗದಂತೆ ತಹಸೀಲ್ದಾರ, ತಾಲೂಕು ಹಂತದ ಅಧಿಕಾರಿಗಳಿಗೆ ಕಟ್ಟು ನಿಟ್ಟಿನ ನಿರ್ದೇಶನ ನೀಡಬೇಕು. ಈ ತಹಸೀಲ್ದಾರರಿಗೆ ಗದಗ ಜಿಲ್ಲೆಯಲ್ಲಿ ಸೇವೆಗೆ ಅವಕಾಶ ಕೊಡಬಾರದು ಎಂದರು. ಚನ್ನಪ್ಪ ಜಗಲಿ ಮಾತನಾಡಿ, ತಹಸೀಲ್ದಾರರ ನಿರ್ಲಕ್ಷ್ಯಕ್ಕೆ ಅವರ ಬದಲಾಗಿ ಕೆಳ ಹಂತದ ಅಧಿಕಾರಿಗಳ ಮೇಲೆ ಮಾಡಿದ ಶಿಸ್ತುಕ್ರಮದ ಆದೇಶ ಗುಬ್ಬಿಯ ಮೇಲೆ ಮಾಡಿದ ಬ್ರಹ್ಮಾಸ್ತ್ರವಾಗುತ್ತದೆ. ಕೂಡಲೇ ಆದೇಶ ವಾಪಸ್ ಪಡೆಬೇಕು ▶▶3ನೇ ಪುಟಕ್ಕೆ

ಗುರುವಾರ ಪ್ರತಿಭಟನಾ ಸ್ಥಳಕ್ಕಾಗಮಿಸಿದ ಅಪರ ಜಿಲ್ಲಾಧಿಕಾರಿ ದುರಗೇಶ ಕೆ.ಆರ್ ಪ್ರತಿಭಟನಾಕಾರರೊಂದಿಗೆ ಮಾತನಾಡಿ, ಆದ ತಪ್ಪಿಗೆ ತಹಸೀಲ್ದಾರರಿಗೆ ನೊಟೀಸ್ ನೀಡಲಾಗುವುದು ಎಂದು ಪ್ರತಿಭಟನಾ ನಿರತರನ್ನು ಸಮಾಧಾನಪಡಿಸಲೆತ್ನಿಸಿದರು. ಘಟನೆಗೆ ಸಂಬಂಧಿಸಿ ತಹಸೀಲ್ದಾರರಿಗೆ ವರ್ಗಾವಣೆ, ಕೆಳಹಂತಹ ಓರ್ವ ಸಿಬ್ಬಂದಿಗೆ ಅಮಾನತ್ತು, ಇಬ್ಬರಿಗೆ ನೋಟೀಸ್ ಸಹ ನೀಡಲಾಗಿತ್ತು. ಆದರೆ ಅಮಾನತ್ತಿನ ಪಟ್ಟು ಸಡಿಲಿಸದ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಬರಬೇಕೆಂದು ಪಟ್ಟು ಹಿಡಿದು ಧರಣಿ ಮುಂದುವರೆಸಿದ್ದರು.

## ನೋಂದಣಿ ಅರ್ಜಿ ಸಲ್ಲಿಸಲು ನ. 6 ಕೊನೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

ಮತದಾರರ ನೋಂದಣಿ ನಿಯಮಗಳು 1960ರ 31 (4)ನೇ ನಿಯಮದ ಅನುಸಾರ ಸಂಬಂಧಿಸಿದ ಪದವೀಧರ ಮತಕ್ಷೇತ್ರದ ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಲು ಅರ್ಹರಿರುವ ಪ್ರತಿಯೊಬ್ಬರೂ ಮತದಾರರ ನೋಂದಣಿ ನಿಯಮ 1960ರನ್ವಯ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಿಸಲಾದ ಎರಡನೇ ಅನುಸೂಚಿಯಲ್ಲಿ ಪುನರುದ್ಧರಿಸಿರುವ ನಮೂನೆ-18ರಲ್ಲಿ ಅರ್ಜಿಯನ್ನು ನವೆಂಬರ್ 6 ಅಥವಾ ಅದಕ್ಕೂ ಮೊದಲು ಮತದಾರರ ನೋಂದಣಾಧಿಕಾರಿಗಳ/ಸಂಬಂಧಪಟ್ಟ ಸಹಾಯಕ ಮತದಾರರ ನೋಂದಣಾಧಿಕಾರಿಗಳ/ನಿಯೋಜಿತ ಅಧಿಕಾರಿಗಳ ಕಚೇರಿಗೆ ಕಳುಹಿಸಲು ಕರೆ ನೀಡಲಾಗಿತ್ತು.

ಪದವೀಧರ ವ್ಯಕ್ತಿಯು ತಮ್ಮ ಹೆಸರನ್ನು ಇದುವರೆಗೂ ಸೇರಿಸದೇ ಇದ್ದಲ್ಲಿ ನಿಗದಿತ ನಮೂನೆ 18ರಲ್ಲಿ ನವೆಂಬರ್ 6ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳು ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್ www.ceokarnataka.kar.nic.in ಇಲ್ಲಿ ಲಭ್ಯವಿದೆ ಎಂದು ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರ ಮತದಾರರ ನೋಂದಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಸಾಪ ದತ್ತಿ ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಅ. 25ರಂದು ಸಂಜೆ 6.30 ಗಂಟೆಗೆ ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ಯೋಗಬಂಧು ಸಂಗಮೇಶ ಮೇಲ್ಮುರಿ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಯೋಗ ಮತ್ತು ಆರೋಗ್ಯ ಕುರಿತು ವೈದ್ಯರು, ಸಾಹಿತಿಗಳಾದ ಡಾ. ಕಲ್ಲೇಶ ಮೂರಶಿಳ್ಳಿನ ಉಪನ್ಯಾಸ ನೀಡುವರು. ಸಂಗಮೇಶ ಮೇಲ್ಮುರಿ ಅವರ ಸಂಸ್ಮರಣೆಯನ್ನು ವಿಭೂತಿ ಪತ್ರಿಕೆಯ ಸಂಪಾದಕ ಅಂದಾನೆಪ್ಪ ವಿಭೂತಿ ಮಾಡುವರು. ಅಧ್ಯಕ್ಷತೆಯನ್ನು ▶▶3ನೇ ಪುಟಕ್ಕೆ

### 'ಉದ್ಯೋಗ ಮೇಳ' ಉದ್ಘಾಟಿಸಿದ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕರೆ

# ಯುವಕರು ನವೀನ ಆವಿಷ್ಕಾರಗಳಲ್ಲಿ ತೊಡಗಿಸಿಕೊಳ್ಳಿ




■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಯುವಕರು ತಮ್ಮ ಸಾಮರ್ಥ್ಯ, ಶ್ರಮ ಹಾಗೂ ನಿಷ್ಠೆಯಿಂದ ದೇಶದ ಅಭಿವೃದ್ಧಿಯಲ್ಲಿ ಸಕ್ರಿಯರಾಗಬೇಕು. ಸರ್ಕಾರವು ಎಲ್ಲ ಕ್ಷೇತ್ರಗಳಲ್ಲಿ ಪಾರದರ್ಶಕತೆ ಹಾಗೂ ಭ್ರಷ್ಟಾಚಾರ ರಹಿತ ವ್ಯವಸ್ಥೆಯನ್ನು ತರಲು ಬದ್ಧವಾಗಿದೆ. ಸರ್ಕಾರಿ ಉದ್ಯೋಗಗಳ ಭರ್ತಿ ಪ್ರಕ್ರಿಯೆಯು ಸಂಪೂರ್ಣವಾಗಿ ನ್ಯಾಯಸಮ್ಮತವಾಗಿದ್ದು, ಅರ್ಹತೆಯ ಆಧಾರದಲ್ಲೇ ನೇಮಕಾತಿ ನಡೆಯುತ್ತಿದೆ ಎಂದು ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಲ್ಹಾದ ಜೋಶಿ ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಭಾರತೀಯ ಅಂಚೆ ಇಲಾಖೆಯು ವಿವಿಧ ಇಲಾಖೆಗಳ ಸಹಯೋಗದಲ್ಲಿ ಹುಬ್ಬಳ್ಳಿಯ ವಿದ್ಯಾನಗರದಲ್ಲಿರುವ ಬಿವಿಬಿ ಇಂಜಿನಿಯರಿಂಗ್ ಕಾಲೇಜ್ ಕ್ಯಾಂಪಸ್‌ನ ಕೆಎಲ್‌ಇ ಟೆಕ್ ಆಡಿಟೋರಿಯಮ್‌ನಲ್ಲಿ ಆಯೋಜಿಸಿದ್ದ ಉದ್ಯೋಗ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ಯುವಜನತೆಗೆ ಉದ್ಯೋಗಗಳ ಕೊರತೆ ಇಲ್ಲ. ಆದರೆ ಅದನ್ನು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳುವ ಜವಾಬ್ದಾರಿ ಯುವ ಸಮುದಾಯದ ಮೇಲಿದೆ. ದೇಶದ ಭವಿಷ್ಯ ಯುವಕರ ಕೈಯಲ್ಲಿದೆ. ಯುವಜನತೆಯು ತಂತ್ರಜ್ಞಾನ, ವಿಜ್ಞಾನ ಹಾಗೂ ನವೀನ ಆವಿಷ್ಕಾರಗಳಲ್ಲಿ ತೊಡಗಿಸಿಕೊಳ್ಳಬೇಕು. ಇದೇ ಹೊಸ ಭಾರತದ ಶಕ್ತಿ ಎಂದು ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರವು ಯುವ ಉದ್ಯೋಗ ಸೃಷ್ಟಿ, ಸ್ಟಾರ್ಟ್‌ಅಪ್ ಪ್ರೋತ್ಸಾಹ, ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳ ಮೂಲಕ ಕೋಟ್ಯಾಂತರ ಯುವಕರಿಗೆ ಹೊಸ ದಾರಿಗಳನ್ನು ತೆರೆಯುತ್ತಿದೆ. ಸರ್ಕಾರಿ ಕೆಲಸ ದೇವರ ಕೆಲಸ ಎಂಬ ನುಡಿಗೆ ಅರ್ಥ ಬರಬೇಕಾದರೆ ಪ್ರತಿಯೊಬ್ಬರೂ ತಮ್ಮ ಕೆಲಸದಲ್ಲಿ ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ತೊಡಗಿಸಿಕೊಳ್ಳಬೇಕು. ನಾಗರಿಕರ ವಿಶ್ವಾಸವನ್ನು ಗೆಲ್ಲುವ ಕಾರ್ಯವೇ ನಿಜವಾದ ದೇಶಸೇವೆ ಎಂದು ಹೇಳಿದರು.


ಭಾರತೀಯ ಅಂಚೆ ಇಲಾಖೆ ಹಾಗೂ ಇತರ ಇಲಾಖೆಗಳ ಅಧಿಕಾರಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.

### ನೇಮಕಾತಿ ಪತ್ರ ವಿತರಣೆ

ಭಾರತೀಯ ಅಂಚೆ ಇಲಾಖೆಯಲ್ಲಿ 42, ಭಾರತೀಯ ರೈಲ್ವೆ ಇಲಾಖೆಯಲ್ಲಿ 14, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ 5, ಸಿ.ಆರ್.ಪಿ.ಎಫ್‌ನಲ್ಲಿ 4 ಜನ ಹೀಗೆ ಧಾರವಾಡ ಜಿಲ್ಲೆಯಲ್ಲಿ ಒಟ್ಟು 65 ಹೊಸ ಉದ್ಯೋಗಿಗಳಿಗೆ ನೇಮಕಾತಿ ಆದೇಶ ಪತ್ರವನ್ನು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ವಿತರಿಸಿದರು.

## ಸಚಿವ ಎಚ್ ಕೆ ಪಾಟೀಲ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಗದಗ ಜಿಲ್ಲೆಯಲ್ಲಿ ಅಕ್ಟೋಬರ್ 25 ರಿಂದ 27 ರವರೆಗೆ ಪ್ರವಾಸ ಕೈಗೊಳ್ಳಲಿದ್ದು, ಪ್ರವಾಸ ವಿವರ ಇಂತಿದೆ.

ಅ. 25ರಂದು ಬೆಳಿಗ್ಗೆ 9 ಗಂಟೆಗೆ ಗದಗ ನಗರದ ಕೆ ಎಚ್ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಸಕ್ತ ಸಾಲಿನ ಪದವಿ ಪೂರ್ವ ಮಹಾವಿದ್ಯಾಲಯಗಳ ಕ್ರೀಡಾಕೂಟದ ಉದ್ಘಾಟನಾ ಸಮಾರಂಭ ನೆರವೇರಿಸುವರು. ಬೆಳಿಗ್ಗೆ 10 ಗಂಟೆಗೆ ಮುಂಡರಗಿ ರಸ್ತೆಯಲ್ಲಿರುವ ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ, ಜೀವನ ಕೌಶಲ್ಯ ತರಬೇತಿ ಮತ್ತು ಯುವ ಕಾರ್ಯಾಗಾರದಲ್ಲಿ ಪಾಲ್ಗೊಳ್ಳುವರು. ನಂತರ ಕೊಪ್ಪಳ ಜಿಲ್ಲೆಗೆ ಪ್ರಯಾಣಿಸಿ ಮಧ್ಯಾಹ್ನ 12:30 ಗಂಟೆಗೆ ಕೊಪ್ಪಳದ ಮಧುಶ್ರೀ ಗಾರ್ಡನ್‌ನಲ್ಲಿ ಸಹಕಾರ ಚಳುವಳಿ ಸುದೀರ್ಘ ಇತಿಹಾಸವನ್ನು ಹೊಂದಿ ಸತತ 25 ವರ್ಷಗಳ ಸಾರ್ಥಕ ಸೇವೆಯನ್ನು ಮಾಡಿದ ಕೊಪ್ಪಳ ಜಿಲ್ಲಾ ಸಹಕಾರಿ ಯೂನಿಯನ್ ರಜತ ಮಹೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1.30 ಗಂಟೆಗೆ ಅಂಜನಾದ್ರಿ ಅಭಿವೃದ್ಧಿ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಚರ್ಚೆ ನಡೆಸುವರು. ಸಂಜೆ 5:30 ರಿಂದ 7.30 ರವರೆಗೆ ಗದಗಿನ ಫಾರೆಸ್ಟ್ ಗೆಸ್ಟ್ ಹೌಸ್ ಬಿಂಕದಕಟ್ಟಿಯಲ್ಲಿ ಗದಗ ಮೃಗಾಲಯ ವಿಸ್ತರಣೆ ಕುರಿತು ಚರ್ಚೆ ನಡೆಸಿ, ನಂತರ ಗದಗನಲ್ಲಿ ವಾಸ್ತವ್ಯ ಮಾಡುವರು.

ಅಕ್ಟೋಬರ್ 26ರಂದು ಬೆಳಗ್ಗೆ 10 ಗಂಟೆಗೆ ಗದಗಿನ ವಾಲ್ಮೀಕಿ ವೃತ್ತ ಡಂಬಳ ನಾಕಾ ಹತ್ತಿರ ಜಿಲ್ಲಾ ಶ್ರೀ ವಾಲ್ಮೀಕಿ ಮತ್ತು ನಾಯಕ ಸೇವಾ ಸಂಘದಿಂದ ಏರ್ಪಡಿಸಿದ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಗ್ಗೆ 10.30 ಗಂಟೆಗೆ ನಗರದ ಜನರಲ್ ಕಾರಿಯಪ್ಪ ಸರ್ಕಲ್‌ನಲ್ಲಿನ ಟಾಟಾ ಮೋಟಾರ್ಸ್ ಹತ್ತಿರ ಸಪ್ತಗಿರಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ▶▶3ನೇ ಪುಟಕ್ಕೆ

### ಲಾರಿ-ಕಾರ್ ನಡುವೆ ಭೀಕರ ಅಪಘಾತ । ದಂಪತಿಗಳ ಸಾವು, ಮೂವರಿಗೆ ಗಾಯ

# ಚಹಾಪುಡಿ ಅಂಗಡಿ ಮಾಲಿಕರು ಇನ್ನಿಲ್ಲ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪುರಸಭೆ ವ್ಯಾಪ್ತಿಯ 20ನೇ ವಾರ್ಡಿನ ಕೃಷ್ಣಾಪೂರ ಗ್ರಾಮದ ಶಿವಲಿಂಗನಗೌಡ ಪಾಟೀಲ (65) ಪ್ರಮೀಳಾ ಪಾಟೀಲ (54) ದಂಪತಿಗಳು ತುಮಕೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ, ನೆಲಮಂಗಲ ತಾಲೂಕಿನ ಟಿ.ಬೇಗೂರು ಗ್ರಾಮದ ಬಳಿ ಲಾರಿ-ಕಾರ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಮೃತಪಟ್ಟಿರುವ ಘಟನೆ ಶುಕ್ರವಾರ ಬೆಳಗಿನ ಜಾವ ನಡೆದಿದೆ.

ಮೃತ ದಂಪತಿಗಳು ರೋಣ ಪಟ್ಟಣ ಸೇರಿದಂತೆ ತಾಲೂಕಿನಲ್ಲಿ ಚಹಾಪುಡಿ ಅಂಗಡಿ ಮಾಲಿಕರು ಎಂದೇ ಪ್ರಸಿದ್ಧರಾಗಿದ್ದರು. ದಂಪತಿಗಳಿಗೆ ಓರ್ವ ಪುತ್ರ ಹಾಗೂ ಇಬ್ಬರು ಪುತ್ರಿಯರಿದ್ದಾರೆ. ಪಟ್ಟಣದಲ್ಲಿ ಚಹಾಪುಡಿ ವ್ಯಾಪಾರದ ಜೊತೆಗೆ ಬುಕ್ ಸ್ಟಾಲ್, ಸ್ಟೇಷನರಿ ಅಂಗಡಿಯನ್ನೂ ಹೊಂದಿದ್ದ ಇವರು, ತಾವು ನಿರ್ಮಿಸಿದ್ದ ಬೃಹತ್ ಕಟ್ಟಡದ ಪ್ರವೇಶವನ್ನು ದೀಪಾವಳಿ ಹಬ್ಬದ ಸಂದರ್ಭದಲ್ಲಿ ಸಂಭ್ರಮದಿಂದ ನೆರವೇರಿಸಿದ್ದರು.

ಕೃಷ್ಣಾಪೂರ ಗ್ರಾಮದಿಂದ ಗುರುವಾರ ರಾತ್ರಿ ಶಿವಲಿಂಗನಗೌಡ ಪಾಟೀಲರು ಪತ್ನಿ ಮತ್ತು ಪತ್ನಿಯ ತಾಯಿ ಅಣ್ಣಮ್ಮ, ಅಳಿಯ ಬಸವರಾಜರೊಡಗೂಡಿ ಚಾಲಕನೊಂದಿಗೆ ▶▶3ನೇ ಪುಟಕ್ಕೆ





ಶಿವನಗೌಡ ದಂಪತಿಗಳ ಮರಣದ ಸುದ್ದಿಯನ್ನು ಕೇಳಿ ನನ್ನ ಮನಸ್ಸಿಗೂ ತುಂಬಾ ಆಘಾತವಾಯಿತು. ದಂಪತಿಗಳಿಬ್ಬರೂ ಸಹ ಎಲ್ಲರೊಂದಿಗೆ ಬೆರೆತು ಜೀವನ ನಿರ್ವಹಿಸಿದವರು. ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ. ಕುಟುಂಬಸ್ಥರೊಂದಿಗೆ ಸದಾ ಇರುತ್ತೇನೆ.

– ಜಿ.ಎಸ್. ಪಾಟೀಲ.
ಶಾಸಕರು, ರೋಣ.




ನಿನ್ನೆ ನೋಡಿದ ದಂಪತಿಗಳು ಇಂದು ಇಲ್ಲವೆಂಬ ವಿಷಯ ಮನಸ್ಸಿಗೆ ನೋವುಂಟುಮಾಡಿದೆ. ಶಿವನಗೌಡ ದಂಪತಿಗಳು ಸದಾ ಹಸನ್ಮುಖಿಯಾಗಿರುತ್ತಿದ್ದರು. ತಮ್ಮ ವ್ಯಾಪಾರ-ವಹಿವಾಟಿನಲ್ಲಿ ಪ್ರಾಮಾಣಿಕತೆಯಿಂದಿದ್ದವರು. ಅವರ ದುರಂತ ಸಾವು ನಮ್ಮನ್ನು ಮೌನಕ್ಕೆ ಜಾರುವಂತೆ ಮಾಡಿದೆ ಎಂದು ವ್ಯಾಪಾರಸ್ಥರು ತಮ್ಮ ದುಃಖವನ್ನು ವ್ಯಕ್ತಪಡಿಸಿದರು.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು 2025-26 ನೇ ಸಾಲಿಗೆ ಮತಿಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಬೌದ್ಧರು, ಸಿಖ್ಖರು, ಫಾರ್ಸಿಗಳ ಸಮುದಾಯದವರಿಗೆ ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸವಾಗಿರುವ ಈ ಕೆಳಗಿನ ಸಾಲದ ಯೋಜನೆಗಳಿಗೆ ಸಾಲ ಸೌಲಭ್ಯ ಒದಗಿಸಲು ನಿಗಮದ ಅಂತರಜಾಲ https://kmdconline.karnataka.gov.in ರಲ್ಲಿ ಅರ್ಜಿಗಳನ್ನು ಅಹ್ವಾನಿಸಲಾಗಿದ್ದು, ಈ 03 ವಿವಿಧ ಯೋಜನೆಗಳಿಗೆ ದಿನಾಂಕ:15-11-2025 ರವರಗೆ ವಿಸ್ತರಿಸಲಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ನೌಕರರ ಕುಟುಂಬದ ಸದಸ್ಯರು ಯೋಜನೆಗಳಿಗೆ ಅರ್ಹರಾಗಿರುವುದಿಲ್ಲ.

**ಸಾಂತ್ವನ ಯೋಜನೆ:** 2025-26 ನೇ ಸಾಲಿಗೆ ಅಲ್ಪಸಂಖ್ಯಾತ ಸಮುದಾಯದ ರಾಜ್ಯದಲ್ಲಿನ ವಿಶೇಷ ಹಾಗೂ ದುರ್ಬಲ ವರ್ಗದ ಫಲಾನುಭವಿಗಳಿಗೆ ಗರಿಷ್ಟ 5.00 ಲಕ್ಷ. ರೂ ರವರಗೆ ಘಟಕ ವೆಚ್ಚಕ್ಕೆ ಶೇ. 50 ರಷ್ಟು ಸಹಾಯಧನ ಮತ್ತು ಶೇ.3ರ ಬಡ್ಡಿ ದರದಲ್ಲಿ ಶೇ.50 ರಷ್ಟು ಸಾಲವನ್ನು ನೀಡಲಾಗುವುದು. ಹಾಗೂ ರಾಜ್ಯದಲ್ಲಿ ಕೋಮು ಗಲಭೆ ಮತ್ತು ಕೋಮು ಹಿಂಸಾಚಾರದ ಸಂದರ್ಭಗಳಲ್ಲಿ ಹಾಗೂ ಪರಿಸರ ವಿಕೋಪಗಳಿಂದ ವ್ಯಾಪಾರ ಕೇಂದ್ರಗಳು ಹಾಗೂ ವಾಸದ ಮನೆಗಳು ನಾಶ ಅಥವಾ ಹಾನಿಗೊಳಗಾಗಿದ್ದರೆ ಅಂತಹ ಪ್ರಕರಣಗಳಲ್ಲಿ ಕನಿಷ್ಟ ರೂ.2.00 ಲಕ್ಷ ನಷ್ಟವಾಗಿದ್ದರೆ ಸಾಲ ಸೌಲಭ್ಯ ಒದಗಿಸಲಾಗುವುದು.

**ಸಮುದಾಯ ಆಧಾರಿತ ತರಬೇತಿ ಯೋಜನೆ:-** ಅಲ್ಪಸಂಖ್ಯಾತರ ಸಮುದಾಯದ ನಿರುದ್ಯೋಗಿ ಯುವಕ-ಯುವತಿಯರಿಗೆ ಸ್ವ-ಉದ್ಯೋಗ/ MNC , BPO ಗಳು ಮತ್ತು ಇತರೆ ಚಟುವಟಿಕೆಗಳಲ್ಲಿ ಉದ್ಯೋಗಕ್ಕಾಗಿ ಹೈವಿ ವಹಿಕಲ್ ಡ್ರೈವಿಂಗ್, ಡ್ರೋನ್ ಚಾಲನ ತರಬೇತಿ, ಬ್ಯೂಟಿ ಪಾರ್ಲರ್ ಕೋರ್ಸ್ (ಪುರುಷ ಮತ್ತು ಮಹಿಳೆಯರಿಗೆ) ತರಬೇತಿಯನ್ನು ನೀಡುತ್ತವೆ. ಹಾಗೂ ಹೆಚ್ಚುವರಿಯಾಗಿ ಅಂತಿಮ ವರ್ಷದ ಬಿ,ಇ/ ಬಿ.ಟೆಕ್ , ಸಿ ಎಸ್, ಐಟಿ, ಇಸಿ, ಇಇಇ, ಎಂಸಿಎ, ಎಂಎಸ್ ಸಿ ಅನ್ನು ಕಂಪ್ಯೂಟರ್ ಸೈನ್ಸ್ ನಲ್ಲಿ ಓದುತ್ತಿರುವ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಪ್ರಾಜೆಕ್ಟ್ ಆಧಾರಿತ ಕಲಿಕೆಯ ಕಾರ್ಯಕ್ರಮಗಳು (ಪ್ರಾಕ್ಟಿಕಮ್) ಸಹ ಲಭ್ಯವಿದೆ. ನಿಗಮದ ವತಿಯಿಂದ ತರಬೇತಿ ನೀಡಲಾಗುವುದು. ವಯೋಮಿತಿ 18 ರಿಂದ 45 ವರ್ಷಗಳು ಇರಬೇಕು.

ಅಲ್ಪಸಂಖ್ಯಾತ ಸಮುದಾಯದ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆ ಅಲ್ಪಸಂಖ್ಯಾತ ಸಮುದಾಯದ ಸ್ವ-ಸಹಾಯ ಗುಂಪುಗಳಿಗೆ ವಿವಿಧ ರೀತಿಯ ಸ್ವಯಂ ಉದ್ಯೋಗ ಚಟುವಟಿಕೆಯಲ್ಲಿ ತೊಡಗಿಸಿ ಅವರನ್ನು ಆರ್ಥಿಕ ಸ್ವಾವಲಂಭಿಯನ್ನಾಗಿ ಮಾಡುವ ಸಲುವಾಗಿ ರಾಷ್ಟ್ರೀಕೃತ/ ಶೆಡ್ಯೂಲ್ ಬ್ಯಾಂಕ್/ RBI ನಿಂದ ಮಾನ್ಯತೆ ಪಡೆದ ವಿವಿಧ ಆರ್ಥಿಕ ಸಂಸ್ಥೆಗಳಿಂದ ಪಡೆಯುವ ಸಾಲಕ್ಕೆ ಘಟಕ ವೆಚ್ಚದ ಶೇ.50 ಅಥವಾ ಗರಿಷ್ಠ 2.00 ಲಕ್ಷ ಸಹಾಯಧನವನ್ನು ನಿಗಮದಿಂದ ಒದಗಿಸಲಾಗುವುದು, ಸಹಾಯಧನವು ಬ್ಯಾಕ್ ಎಂಡ್ ಸಬ್ಸಿಡಿಯಾಗಿದ್ದು ಸ್ವ-ಸಹಾಯ ಸಂಘಗಳು ಆರ್ಥಿಕ ಬ್ಯಾಂಕಗಳಿಂದ ಪಡೆದ ಸಾಲದ ಮರುಪಾವತಿ ಹೊಂದಾಣಿಕೆ ಮಾಡಲಾಗವುದು. ಜಿಲ್ಲೆಯ ಅರ್ಹ ಅಲ್ಪಸಂಖ್ಯಾತರು ಮೇಲ್ಕಂಡ 2025-26ನೇ ಸಾಲಿನ ಈ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ:15-11-2025 ವಿಸ್ತರಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಅರ್ಜಿ ಹಾಗೂ ದಾಖಲಾತಿಗಳನ್ನು ನಕಲು ಪ್ರತಿಯನ್ನು ಜಿಲ್ಲಾ ಕಛೇರಿಗೆ ಸಲ್ಲಿಸಲು ಅಗತ್ಯವಿರುವುದಿಲ್ಲ. ಹಾಗೂ ಜಿಲ್ಲಾ ಕಛೇರಿಯಲ್ಲಿ ಯಾವುದೇ ಅರ್ಜಿಗಳ ಜೊತೆ ದಾಖಲಾತಿಗಳನ್ನು ಸ್ವೀಕರಿಸುವುದಿಲ್ಲ. ಹಾಗೂ ನಿಗಮದ ಅಂತರಜಾಲ https://kmdconline.karnataka.gov.in ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08372-295147 ಸಂಪರ್ಕಿಬೇಕೆಂದು ಹಾಗೂ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ನಿಯಮಿತ ಗದಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಕರ್ನಾಟಕ ಏಕೀಕರಣ' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಶಂಕರ ಹಲಗತ್ತಿ ಅಭಿಮತ

# ಏಕೀಕರಣದ ಆಶಯಗಳ ಮರುಚಿಂತನೆ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಇಂದು ರಾಜ್ಯದಲ್ಲಿ ಏಕೀಕರಣದ ಮೂಲ ಆಶಯಗಳನ್ನು ಮರು ಚಿಂತಿಸುವ ಅಗತ್ಯವಿದೆ ಎಂದು ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಅವರು ಹೇಳಿದರು.

ಅವರು ಶುಕ್ರವಾರ ಧಾರವಾಡದ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ವತಿಯಿಂದ ಜರುಗಿದ ಕರ್ನಾಟಕ ಏಕೀಕರಣ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಜಾಗೃತಿ ಮೂಡಿಸುವುದು, ಯುವ ಪೀಳಿಗೆಗೆ ಏಕೀಕರಣದ ಮೌಲ್ಯಗಳನ್ನು ತಿಳಿಸುವುದು ಮತ್ತು ಜಾತಿ ನಿರ್ಮೂಲನೆಗಾಗಿ ಶ್ರಮಿಸುವುದು ಇಂದಿನ ತುರ್ತು ಅಗತ್ಯ ಎಂದು ತಿಳಿಸಿದರು.




ಪ್ರತಿಯೊಬ್ಬ ಕನ್ನಡಿಗನೂ ಕನ್ನಡ ಭಾಷೆ ಉಳಿಸಲು ಮತ್ತು ಬೆಳೆಸಲು ವೈಯಕ್ತಿಕ ಜವಾಬ್ದಾರಿ ಹೊಂದಬೇಕು. ಕನ್ನಡ ಭಾಷಗೆ ಗೌರವ ಮತ್ತು ಪ್ರಾಮುಖ್ಯತೆ ನೀಡುವ, ಪ್ರತಿಯೊಬ್ಬರಲ್ಲೂ ಕನ್ನಡದ ಬಗ್ಗೆ ಅಭಿಮಾನ ಮೂಡಿಸುವಂತಹ ವಾತಾವರಣವನ್ನು ಸೃಷ್ಟಿಸಲು ಶ್ರಮಿಸೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಡಾ. ಶ್ರೀನಿವಾಸ ವಾಡಪ್ಪಿ ಅವರು ಕರ್ನಾಟಕ ಏಕೀಕರಣ ಚರಿತ್ರೆಯ ಕುರಿತು, ಹೊಂಬೆಳಕು ಪ್ರತಿಷ್ಠಾನ ಹಾಗೂ ಶ್ರೀ ಸಾಯಿ ಪದವಿಪೂರ್ವ ಕಾಲೇಜು ಸಂಸ್ಥಾಪಕ ಅಧ್ಯಕ್ಷೆ ಡಾ. ವೀಣಾ ಬಿರಾದಾರ ಅವರು ಕನಾಟಕ ಏಕೀಕರಣ ಚಳುವಳಿಯಲ್ಲಿ ಮಹಿಳೆಯರ ಪಾತ್ರದ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

> ಸರ್ಕಾರಿ ಶಾಲೆಗಳಲ್ಲಿರುವ ಸೌಲಭ್ಯಗಳು ಮತ್ತು ಶಿಕ್ಷಕರ ಅರ್ಹತೆಗಳ ಬಗ್ಗೆ ಪೋಷಕರಿಗೆ ಹೆಚ್ಚಿನ ಅರಿವು ಮೂಡಿಸಬೇಕು. ಜೊತೆಗೆ ಕನ್ನಡ ಮಾಧ್ಯಮದಲ್ಲಿ ನೀಡುವ ಗುಣಮಟ್ಟದ ಶಿಕ್ಷಣದಿಂದ ಉತ್ತಮ ಭವಿಷ್ಯ ಸಾಧ್ಯ ಎಂಬುದನ್ನು ಮನವರಿಕೆ ಮಾಡಿಕೊಡಬೇಕಿದೆ ಎಂದು ರಂಜಾನ್ ದರ್ಗಾ ಹೇಳಿದರು.

ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ರಾಷ್ಟ್ರೀಯ ಸ್ಮಾರಕ ಟ್ರಸ್ಟ್‌ನ ಅಧ್ಯಕ್ಷ ರಂಜಾನ್ ದರ್ಗಾ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಆಲೂರು ವೆಂಕಟರಾವ ಅವರ ನಾಯಕತ್ವದಲ್ಲಿ ನಡೆದ ಈ ಹೋರಾಟ ಕೇವಲ ಗಡಿಗಳನ್ನು ಸೇರಿಸುವುದಕ್ಕೆ ಸೀಮಿತವಾಗಿರಲಿಲ್ಲ. ಬದಲಾಗಿ, ಕನ್ನಡತನವನ್ನು ಎತ್ತಿ ಹಿಡಿಯುವ ಪ್ರಯತ್ನವಾಗಿತ್ತು. ಅವರ ಬಲಿದಾನ ಅಂದರೆ ತಮ್ಮ ಇಡೀ ಜೀವನವನ್ನು ಕನ್ನಡಕ್ಕಾಗಿ ಮುಡಿಪಾಗಿಟ್ಟಿದ್ದು, ಏಕೀಕೃತ ಕರ್ನಾಟಕ ರಾಜ್ಯದ ನಿರ್ಮಾಣಕ್ಕೆ ಭದ್ರ ಬುನಾದಿ ಹಾಕಿತು ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿದರು. ರವಿ ಕುಲಕರ್ಣಿ ಅವರು ನಿರೂಪಿಸಿ, ವಂದಿಸಿದರು. ಡಾ. ದೀಪಕ ಆಲೂರ, ದ್ರೌಪದಿ ಬಿಜಾಪುರ, ಬಸವರಾಜ ಸೂಳಿಭಾವಿ, ಸುನಂದಾ ಕಡಮೆ ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ವಿದ್ಯಾರ್ಥಿಗಳು, ಸಾರ್ವಜನಿಕರು ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಮುಂದಿನ ಸಿಜೆಐ ನೇಮಕ ಪ್ರಕ್ರಿಯೆಗೆ ಚಾಲನೆ; ನ.3 ರಂದು ಬಿ.ಆರ್. ಗವಾಯಿ ನಿವೃತ್ತಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೇಂದ್ರ ಸರ್ಕಾರ ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಬಿ.ಆರ್. ಗವಾಯಿ ಅವರಿಗೆ ಪತ್ರ ಬರೆದು, ತಮ್ಮ ಉತ್ತರಾಧಿಕಾರಿಯ ನೇಮಕಕ್ಕೆ ಶಿಫಾರಸು ಕೋರಿದೆ.

ಈ ಪ್ರಕ್ರಿಯೆಯು ಮುಂದಿನ ಸಿಜೆಐ ನೇಮಕಾತಿ ಕಾರ್ಯವಿಧಾನದ ಔಪಚಾರಿಕ ಆರಂಭವನ್ನು ಸೂಚಿಸುತ್ತದೆ. ಇದು ಸಾಂಪ್ರದಾಯಿಕವಾಗಿ ಹಾಲಿ ಸಿಜೆಐ ಹುದ್ದೆಯಿಂದ ನಿರ್ಗಮಿಸುವ ಸುಮಾರು ಒಂದು ತಿಂಗಳ ಮೊದಲು ತೆಗೆದುಕೊಳ್ಳಲಾಗುವ ಹೆಜ್ಜೆಯಾಗಿದೆ. ಸಿಜೆಐ ಗವಾಯಿ ನವೆಂಬರ್ 23 ರಂದು ನಿವೃತ್ತರಾಗಲಿದ್ದಾರೆ.

ಇದು ನಿರ್ಗಮನ ಸಿಜೆಐ ದೇಶದ ಅತ್ಯುನ್ನತ ನ್ಯಾಯಾಂಗ ಹುದ್ದೆಯನ್ನು ಹೊಂದಲು ಸೂಕ್ತವೆಂದು ಪರಿಗಣಿಸಲಾದ ಸುಪ್ರೀಂ ಕೋರ್ಟ್‌ನ ಅತ್ಯಂತ ಹಿರಿಯ ನ್ಯಾಯಾಧೀಶರನ್ನು ಹೆಸರಿಸುವ ಸ್ಥಾಪಿತ ಸಂಪ್ರದಾಯಕ್ಕೆ ಅನುಗುಣವಾಗಿದೆ.

ಹಿರಿತನದ ಪ್ರಕಾರ, ನ್ಯಾಯಮೂರ್ತಿ ಸೂರ್ಯ ಕಾಂತ್ ಭಾರತದ 53 ನೇ ಮುಖ್ಯ ನ್ಯಾಯಮೂರ್ತಿಯಾಗಲು ಮುಂದಿನ ಸ್ಥಾನದಲ್ಲಿದ್ದಾರೆ. ನ್ಯಾಯಮೂರ್ತಿ ಗವಾಯಿ ಅವರ ನಿವೃತ್ತಿಯ ನಂತರ ಅವರು ಅಧಿಕಾರ ವಹಿಸಿಕೊಳ್ಳುವ ನಿರೀಕ್ಷೆಯಿದೆ.

ಪ್ರಸ್ತುತ ಭೂತಾನ್‌ಗೆ ನಾಲ್ಕು ದಿನಗಳ ಅಧಿಕೃತ ಭೇಟಿಯಲ್ಲಿರುವ ಸಿಜೆಐ ಗವಾಯಿ, ನವದೆಹಲಿಗೆ ಹಿಂದಿರುಗಿದ ನಂತರ ಕೇಂದ್ರ ಸರ್ಕಾರಕ್ಕೆ ತಮ್ಮ ಶಿಫಾರಸನ್ನು ಕಳುಹಿಸುವ ನಿರೀಕ್ಷೆಯಿದೆ.

ಉನ್ನತ ನ್ಯಾಯಾಂಗಕ್ಕೆ ನೇಮಕಾತಿಗಳನ್ನು ನಿಯಂತ್ರಿಸುವ ಕಾರ್ಯವಿಧಾನದ ಜ್ಞಾಪಕ ಪತ್ರದಡಿಯಲ್ಲಿ, ಕೇಂದ್ರ ಕಾನೂನು ಸಚಿವ ಕಿರಣ್ ರಿಜಿಜು ಅವರು ತಮ್ಮ ಉತ್ತರಾಧಿಕಾರಿಯನ್ನು ಹೆಸರಿಸಲು ನಿರ್ಗಮಿತ ಸಿಜೆಐ ಅವರ ಶಿಫಾರಸನ್ನು ಕೋರುತ್ತಾರೆ. ಇದು ನ್ಯಾಯಾಂಗದ ನಾಯಕತ್ವದಲ್ಲಿ ಸುಗಮ ಪರಿವರ್ತನೆಯನ್ನು ಖಚಿತಪಡಿಸಿಕೊಳ್ಳಲು ವಿನ್ಯಾಸಗೊಳಿಸಲಾದ ಪ್ರಕ್ರಿಯೆಯಾಗಿದೆ.

ರಾಜ್ಯ ಮಟ್ಟದ ಯುವ ಕಲಾವಿದರ ಚಿತ್ರಕಲಾ ಶಿಬಿರ ಅ.29ರಿಂದ

# ರಾಜ್ಯೋತ್ಸವದ ಅಂಗವಾಗಿ ಬಣ್ಣದ ಹಬ್ಬ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಚಿತ್ರಕಲಾ ಶಿಲ್ಪಿ ಡಿ.ವ್ಹಿ. ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್‌ನಿಂದ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಬಣ್ಣದ ಹಬ್ಬ-ರಾಜ್ಯ ಮಟ್ಟದ ಯುವಕಲಾವಿದರ ಚಿತ್ರಕಲಾ ಶಿಬಿರವನ್ನು ಅ. 29ರಿಂದ ಅ.31ರವರೆಗೆ ಧಾರವಾಡದ ಸರ್ಕಾರಿ ಆರ್ಟ್ ಗ್ಯಾಲರಿಯಲ್ಲಿ ಏರ್ಪಡಿಸಲಾಗಿದೆ.

ಅ.29ರಂದು ಬೆಳಿಗ್ಗೆ 10 ಗಂಟೆಗೆ ಸರ್ಕಾರಿ ಆರ್ಟ್ ಗ್ಯಾಲರಿಯಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಶಿಬಿರವನ್ನು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಬೆಳಗಾವಿ ವಿಭಾಗದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಕೆ.ಎಚ್. ಚನ್ನೂರ ಹಾಗೂ ಧಾರವಾಡ ಹಿರೇಮಲ್ಲೂರ ಈಶ್ವರನ್ ಪದವಿಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ ಪ್ರಾಚಾರ್ಯ ಶಶಿಧರ ತೋಡಕರ ಭಾಗವಹಿಸುವರು. ಟ್ರಸ್ಟಿನ ಅಧ್ಯಕ್ಷ ಬಿ.ಮಾರುತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಟ್ರಸ್ಟಿನ ಸದಸ್ಯರಾದ ಡಾ ಬಿ.ಎಚ್. ಕುರಿಯವರ ಪ್ರಾಸ್ತಾವಿಕವಾಗಿ ಮಾತನಾಡುವರು ಹಾಗೂ ಟ್ರಸ್ಟ್ ಸದಸ್ಯರುಗಳು ಉಪಸ್ಥಿತರಿರುವರು. ಶಿಬಿರದಲ್ಲಿ ವಿವಿಧ ಜಿಲ್ಲೆಗಳಿಂದ ಯುವ ಚಿತ್ರಕಲಾವಿದರು ಭಾಗವಹಿಸುವರು. ಕಲಾವಿದರು ರಚಿಸಿರುವ ಕಲಾಕೃತಿಗಳ ಪ್ರದರ್ಶನ ಹಾಗೂ ಟ್ರಸ್ಟಿನ ಕಲಾಕೃತಿಗಳ ಪ್ರದರ್ಶನವನ್ನು ನವೆಂಬರ 1ರಿಂದ 10ರವರೆಗೆ ಕರ್ನಾಟಕ ವಿದ್ಯಾವರ್ಧಕ ಸಂಘದ ಚಿತ್ರಕಲಾ ಪ್ರದರ್ಶನ ಭವನದಲ್ಲಿ ಏರ್ಪಡಿಸಲಾಗಿದೆ.

ಕಲಾಕೃತಿಗಳ ಪ್ರದರ್ಶನದ ಉದ್ಘಾಟನಾ ಸಮಾರಂಭವು ನ. 1ರಂದು ಸಂಜೆ 5.30 ಗಂಟೆಗೆ ಕರ್ನಾಟಕ ವಿದ್ಯಾವರ್ಧಕ ಸಂಘದ ಚಿತ್ರಕಲಾ ಪ್ರದರ್ಶನ ಭವನದಲ್ಲಿ ನೆರವೇರುವುದು. ಕಾರ್ಯಕ್ರಮವನ್ನು ಹಿರಿಯ ಚಿತ್ರ ಕಲಾವಿದ ಡಾ. ಎಸ್.ಸಿ. ಪಾಟೀಲ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಕ್ಕಳ ಸಾಹಿತಿ ಡಾ. ಆನಂದ ಪಾಟೀಲ ಭಾಗವಹಿಸುವರು. ಟ್ರಸ್ಟಿನ ಅಧ್ಯಕ್ಷ ಬಿ. ಮಾರುತಿ ಅಧ್ಯಕ್ಷತೆ ವಹಿಸುವರು. ಚಿತ್ರಕಲಾವಿದರು, ಚಿತ್ರಕಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಹಾಗೂ ಕಲಾಸಕ್ತರು ಈ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಲು ಟ್ರಸ್ಟಿನ ಸದಸ್ಯ ಕಾರ್ಯದರ್ಶಿ ಕುಮಾರ ಬೆಕ್ಕೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇವಸ್ಥಾನದ ಉದ್ಘಾಟನಾ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಆಧ್ಯಾತ್ಮ ಸಾಧನೆಯಿಂದ ಸುಖ ಪ್ರಾಪ್ತಿ



■ ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು

ಮಾನವ ಜೀವನ ಅಮೂಲ್ಯವಾದುದು. ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ ಮತ್ತು ಮೋಕ್ಷವನ್ನು ಸಂಪಾದಿಸಿಕೊಂಡು ಬಾಳಬೇಕೆಂದು ಶಾಸ್ತ್ರ ನಿರೂಪಿಸುತ್ತದೆ. ಆಧ್ಯಾತ್ಮ ಅರಿವು ಮತ್ತು ಸಾಧನೆಯಿಂದ ಬದುಕಿನಲ್ಲಿ ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಹೊನ್ನತ್ತಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಶ್ರೀ ಹೊನ್ನನಾಗದೇವತಾ ಹಾಗೂ ಶ್ರೀ ಹೇಮಾವತಿ ದೇವಸ್ಥಾನದ ಉದ್ಘಾಟನೆ ಹಾಗೂ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮದ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಅದ್ಭುತ ಶಕ್ತಿಯಿದೆ. ಧರ್ಮದ ಆದರ್ಶ ಮೌಲ್ಯಗಳನ್ನು ಅರಿತು ಆಚರಿಸಿ ಬಾಳುವಲ್ಲಿ ಜೀವನದ ಶ್ರೇಯಸ್ಸಿದೆ. ದೇವರು, ಧರ್ಮದಲ್ಲಿ ಶ್ರದ್ಧೆ ನಂಬಿಕೆ ಯಾವತ್ತೂ ನಾಶಗೊಳ್ಳಬಾರದು. ಈ ಭೂಮಿಯನ್ನು ಹೊತ್ತ ಆದಿಶೇಷನ ಶಕ್ತಿ ಅಪಾರ. ಸರ್ಪದೋಷ ನಿವಾರಣೆಗಾಗಿ ಎಲ್ಲೆಲ್ಲೋ ಹೋಗುವ ಜನರಿಗಾಗಿ ಇಂದು ಈ ಗ್ರಾಮದಲ್ಲಿಯೇ ಹೊನ್ನನಾಗದೇವತೆ ನೆಲೆಗೊಂಡಿರುವುದು ತಮ್ಮ ಶ್ರದ್ಧೆಗೆ ಸಾಕ್ಷಿಯಾಗಿದೆ. ದೇವನೊಬ್ಬ-ನಾಮ ಹಲವು. ಇದನ್ನರಿತು ಧರ್ಮ ದೈವದ ಶಕ್ತಿ ಒಂದೇ ಆಗಿದೆಯೇ ಹೊರತು ಬೇರೆ ಬೇರೆಯಿಲ್ಲ. ಭಜಿಸುವ, ಪೂಜಿಸುವ, ಸ್ಮರಿಸುವ ನಿಷ್ಠೆಯಿದ್ದರೆ ಬಾಳು ಉಜ್ವಲಗೊಳ್ಳುವುದು. ಶ್ರೀ ಜಗದ್ಗುರು ರೇಣುಕಾಚಾರ್ಯರ ಆದರ್ಶ ಮೌಲ್ಯಗಳನ್ನು ಅರಿತು ಬಾಳಬೇಕೆಂದರು.

> ಸಮಾರಂಭ ಉದ್ಘಾಟಿಸಿ ಮಾತನಾಡಿದ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು, ಅಶಾಂತಿಯಿಂದ ತತ್ತರಿಸುತ್ತಿರುವ ಈ ಜೀವ ಜಗತ್ತಿಗೆ ಶಾಂತಿ ಬೇಕಾಗಿದೆ. ಶಾಂತಿಯ ಮೂಲ ಧರ್ಮ ಪರಿಪಾಲನೆಯಲ್ಲಿದೆ. ಹೊನ್ನನಾಗದೇವತಾ-ಹೇಮಾವತಿ ಶಕ್ತಿ ಅಪಾರವಾಗಿದೆ. ನಮ್ಮ ನಂಬಿಗೆ, ವಿಶ್ವಾಸಕ್ಕೆ ತಕ್ಕಂತೆ ಫಲಗಳನ್ನು ಪಡೆಯಲು ಸಾಧ್ಯವಾಗುವುದೆಂದರು.

ಶಾಸಕ ಪ್ರಕಾಶ ಕೋಳಿವಾಡ ಮಾತನಾಡಿ, ಬಹುದಿನಗಳ ಸಂಕಲ್ಪ ಇವತ್ತು ಪೂರ್ಣಗೊಂಡಿರುವುದು ಸಂತೋಷದ ಸಂಗತಿ. ಶಿವಶಕ್ತಿಯಿಂದ ಈ ಜಗತ್ತು ತುಂಬಿದೆ. ಜಗನ್ಮಾತೆ ಹೊನ್ನನಾಗದೇವತಾ-ಹೇಮಾವತಿ ನೆಲೆಗೊಂಡಿರುವುದು ನಮ್ಮೆಲ್ಲರ ಸೌಭಾಗ್ಯವೆಂದರು.

ದೇವಸ್ಥಾನದ ಮುಖ್ಯಸ್ಥ ಶಿವಣ್ಣ ಲಮಾಣಿ ಸ್ವಾಗತಿಸಿ ಪ್ರಾಸ್ತಾವಿಕ ನುಡಿ ನುಡಿದರು. ಶಿಕ್ಷಕಿ ಕಸ್ತೂರಮ್ಮ ಪಾಟೀಲ ನಿರೂಪಿಸಿದರು. ವೈದಿಕ ಕಾರ್ಯಕ್ರಮಗಳನ್ನು ತೆಲಗುಂದದ ಗುರುಶಾಸ್ತ್ರಿ ಬಳಗದವರು ನೆರವೇರಿಸಿದರು.

# ಬೇಡಿಕೆಗಳ ಈಡೇರಿಕೆಗೆ ಮುಖ್ಯಾಧಿಕಾರಿಗಳಿಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ಪಟ್ಟಣದ ಅಭಿವೃದ್ಧಿಯ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಮುಂಡರಗಿ ಪುರಸಭೆ ಮುಖ್ಯಾಧಿಕಾರಿಗಳಿಗೆ ಕನ್ನಡ ಜನಾಭಿವೃದ್ಧಿ ವೇದಿಕೆ ಗದಗ ಜಿಲ್ಲಾ ಘಟಕದ ವತಿಯಿಂದ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಘಟಕದ ಜಿಲ್ಲಾಧ್ಯಕ್ಷ ಗಣೇಶ ಹಾತಲಗೇರಿ ಮಾತನಾಡಿ, ಮುಂಡರಗಿ ನಗರದಲ್ಲಿ ಅಳವಡಿಸಿರುವ ಹೈಮಾಸ್ಟ್ ದೀಪಗಳು ದುರಸ್ತಿಯಲ್ಲಿದ್ದು, ಅವುಗಳನ್ನು ಶೀಘ್ರವೇ ಸರಿಪಡಿಸಬೇಕು. ರಸ್ತೆ ಮಧ್ಯ ಹಾಕಿರುವ ರಸ್ತೆ ಡಿವೈಡರ್‌ಗೆ ಬಣ್ಣ ಹಚ್ಚುವಂತೆ ಮನವಿ ಸಲ್ಲಿಸಿದರು.

ಪುರಸಭೆ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ತಾಲೂಕಾಧ್ಯಕ್ಷ ಸುಭಾಷ ಕಿತ್ತೂರ, ಗೌರವಾಧ್ಯಕ್ಷ ಉಮೇಶ ಹಿರೇಮಠ, ಕಾರ್ಯದರ್ಶಿ ಸಂತೋಷ ಹಡಪದ, ಪುರಸಭೆ ಸದಸ್ಯ ಸಂತೋಷ ಹಿರೇಮನಿ ಉಪಸ್ಥಿತರಿದ್ದರು.

# ಕೆ.ಎಲ್.ಇ ವಿದ್ಯಾರ್ಥಿಗಳಿಂದ ಅಧ್ಯಯನ ಭೇಟಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ವಾಣಿಜ್ಯ ವಿಭಾಗದ ಅಂತಿಮ ವರ್ಷದ ವಿದ್ಯಾರ್ಥಿಗಳು ರೋಟರಿ ಸರ್ಕಲ್ ಹತ್ತಿರದ ಬ್ಯಾಂಕ್ ಆಫ್ ಬರೋಡಾ ಶಾಖೆಗೆ ಅಧ್ಯಯನ ಭೇಟಿಯನ್ನು ಕೈಗೊಂಡಿದ್ದರು. ವಿದ್ಯಾರ್ಥಿಗಳಿಗೆ ಬ್ಯಾಂಕಿನ ವ್ಯವಸ್ಥಾಪಕರಾದ ವಾಣಿಶ್ರೀ ಅವರು ಬ್ಯಾಂಕಿನ ಕಾರ್ಯನಿರ್ವಹಣೆ, ಹಣಕಾಸು ಸೌಲಭ್ಯಗಳು, ಇನ್ನಿತರ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ಪ್ರಾಯೋಗಿಕವಾಗಿ ತಿಳಿಸಿದರು.

ಮಹಾವಿದ್ಯಾಲಯದ ಬಿ.ಕಾಂ ಅಂತಿಮ ವರ್ಷದ ವಿದ್ಯಾರ್ಥಿಗಳು ಅಧ್ಯಯನ ಭೇಟಿಯ ಸದುಪಯೋಗ ಪಡೆದುಕೊಂಡರು. ಉಪನ್ಯಾಸಕರಾದ ಪ್ರೊ. ಶ್ವೇತಾ ರಾಚಯ್ಯನವರ, ಪ್ರೊ. ಹರ್ಷ ನಿಲೂಗಲ್, ಪ್ರೊ. ಐ.ಬಿ. ಪಾಟೀಲ ಪಾಲ್ಗೊಂಡಿದ್ದರು.

# ಈಶ್ವರೀಯ ವಿಶ್ವವಿದ್ಯಾಲಯದಿಂದ ದೀಪಾವಳಿ ಸಂದೇಶ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಈಶ್ವರೀಯ ವಿಶ್ವವಿದ್ಯಾಲಯದ ವತಿಯಿಂದ ಸಂಚಾಲಕಿ ಬಿ.ಕೆ. ಸವಿತಕ್ಕ ದೀಪಾವಳಿ ಸಂದೇಶವನ್ನು ನೀಡಿದರು.

ದೀಪಾವಳಿ ದೀಪಗಳ ಹಬ್ಬವಾಗಿದೆ. ಕತ್ತಲೆಯನ್ನು ಕಳೆದು ಜ್ಞಾನದ ಬೆಳಕನ್ನು ನೀಡುವ ಹಬ್ಬವೇ ದೀಪಾವಳಿಯಾಗಿದೆ. ದೀಪಾವಳಿಯನ್ನು ಹಬ್ಬಗಳ ಮಹಾರಾಜ ಎಂದೇ ಕರೆಯುತ್ತಾರೆ. ಹೀಗಾಗಿ ಈ ಹಬ್ಬವನ್ನು ಯಾವುದಾದರೊಂದು ಪ್ರಾಂತ, ಸ್ಥಳದಲ್ಲಿ ಆಚರಿಸದೆ ದೇಶ-ವಿದೇಶಗಳಲ್ಲಿಯೂ ಆಚರಿಸುವುದನ್ನು ಕಾಣುತ್ತೇವೆ. ಅಂದರೆ ಜ್ಞಾನದ ಬೆಳಕು ಎಲ್ಲರಿಗೂ ಬೇಕು ಎಂಬುದೇ ಇದರ ಅರ್ಥವಾಗಿದೆ ಎಂದು ಹೇಳಿದರು.



ದೀಪಗಳ ಸಾಲನ್ನೇ ಹೊತ್ತು ತರುವ ಹಬ್ಬ ದೀಪಾವಳಿಯಾಗಿದೆ. ಇದು ಪ್ರತಿಯೊಬ್ಬ ಮಾನವನ ಸಂಸ್ಕಾರದಲ್ಲಿ ಆತ್ಮಿಕ ಪ್ರೇಮ, ಶಾಂತಿ, ಸಹನೆ, ಸೌಹಾರ್ದತೆ, ಏಕತೆ, ಸಹನಶೀಲತೆ, ಪವಿತ್ರತೆ, ಪ್ರಾಮಾಣಿಕತೆ, ಸತ್ಯತೆ ಎನ್ನುವ ಅನೇಕ ದಿವ್ಯ ಗುಣಗಳ ದೀಪವು ನಿತ್ಯವೂ ಪ್ರಜ್ವಲಿಸುತ್ತಿದ್ದರೆ ಅದೇ ಸತ್ಯದ ದೀಪಾವಳಿ. ನಿಮ್ಮ ಜೀವನದಲ್ಲಿ ನಿತ್ಯವೂ ದೀಪಾವಳಿಯಾಗಬೇಕಿದ್ದರೆ ನೀವು ಶಿವನನ್ನು ನಿರಂತರ ಧ್ಯಾನ ಮಾಡುತ್ತ, ಅವಗುಣಗಳ ಕಸವನ್ನು ತೆಗೆಯುತ್ತ, ಸದ್ಗುಣಗಳ ಸಂಗ್ರಹಣೆ ಮಾಡುತ್ತ ಸಂಸ್ಕಾರ ನಿರ್ಮಾಣ ಮಾಡುತ್ತಿದ್ದರೆ ಅದೇ ನಿತ್ಯ ದೀಪಾವಳಿಯಾಗುತ್ತದೆ. ಇದನ್ನು ನಿಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದು ಬಿ.ಕೆ. ಸವಿತಕ್ಕ ಹೇಳಿದರು.

ಈ ಸಂದರ್ಭದಲ್ಲಿ ಅನ್ನಪೂರ್ಣ ಅಣಗೌಡ್ರ, ವಿದ್ಯಾ ಹೆಗಡೆ, ಅಕ್ಕಮಹಾದೇವಿ ಹಿರೇಮಠ, ರತ್ನಾ ಬಾಣದ, ಶಿವಲಿಂಗಪ್ಪ ತಿಪ್ಪಶೆಟ್ಟಿ, ಶಾರದಾ ಬೇವಿನಕಟ್ಟಿ ಮತ್ತಿತರರು ಉಪಸ್ಥಿತರಿದ್ದರು.

## ಆತಂಕದಲ್ಲಿ ಈರುಳ್ಳಿ ಬೆಳೆಗಾರರು



■ವಿಜಯಸಾಕ್ಷಿ ಸುದ್ದಿ, ಡಂಬಳ

ಹೋಬಳಿ ವ್ಯಾಪ್ತಿಯಲ್ಲಿ ಬುಧವಾರ ಹಾಗೂ ಗುರುವಾರ ಹಗಲು ರಾತ್ರಿ ಧಾರಾಕಾರ ಮಳೆಯಾಗಿದ್ದು, ಈರುಳ್ಳಿ ಬೆಳೆದ ರೈತರಲ್ಲಿ ಆತಂಕ ಮೂಡಿದೆ. ಸಾವಿರಾರು ಎಕರೆ ಪ್ರದೇಶದಲ್ಲಿ ಬೆಳೆದಿರುವ ಮೆಕ್ಕೆಜೋಳ, ಈರುಳ್ಳಿ, ಶೇಂಗಾ ಬೆಳೆಗಳು ಕೊಳೆತುಹೋಗುವ ಭಯ ಆವರಿಸಿದೆ.

ಕಟಾವು ಹಂತದಲ್ಲಿರುವ, ಕಟಾವು ಮಾಡಿ ಜಮೀನಿನಲ್ಲಿರುವ ಈರುಳ್ಳಿ ಬೆಳೆಗಳನ್ನು ಮತ್ತು ಕಟಾವು ಮಾಡಿ ಡಂಬಳ ಗ್ರಾಮದ ಎಪಿಎಂಸಿ, ತೋಂಟ-ದಾರ್ಯ ಮಠದ ಆವರಣದ ಮುಂದೆ, ತಾಂಬೋಟಿಯವರ ಜಮೀನಿನಲ್ಲಿ, ಶ್ರೀ ಹಾಲೇಶ್ವರ ಗದ್ದುಗೆಯ ಖಾಲಿ ಜಾಗದಲ್ಲಿ ನೂರಾರು ರೈತರು ಈರುಳ್ಳಿ ಬೆಳೆಗೆ ತಾಡಪತ್ರಿಗಳನ್ನು ಮುಚ್ಚಿ ಬೆಳೆ ರಕ್ಷಣೆಗೆ ಮುಂದಾದರು. ಕೇಂದ್ರ ಮತ್ತು ರಾಜ್ಯ ಸರ್ಕಾರ ಸೂಕ್ತ ಬೆಳೆ ಹಾನಿ ಪರಿಹಾರ ಮತ್ತು ಈರುಳ್ಳಿ ಖರೀದಿ ಕೇಂದ್ರಗಳನ್ನು ತೆರೆದು ಸೂಕ್ತ ಬೆಲೆ ಕೊಡಿಸಲು ಜನ ಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು ಮುಂದೆ ಬರಬೇಕು ಎಂದು ಡಂಬಳ ಹೋಬಳಿಯ ರೈತರಾದ ರಾಮಣ್ಣ, ಮಂಜುಪ್ಪ ಸೇರಿದಂತೆ ರೈತ ಸಂಘಟನೆಗಳು ಒತ್ತಾಯಿಸಿವೆ.

### ಎಮ್ಮೆ ಬೆದರಿಸುವ ಸ್ಪರ್ಧೆಯ ಮೂಲಕ ದೀಪಾವಳಿಯನ್ನು ವಿಶಿಷ್ಟವಾಗಿ ಆಚರಿಸಿದ ಗೌಳಿಗರು

# ಗೌಳಿಗರ ವಿಶಿಷ್ಟ 'ಪಾಂಡವರ ಹಬ್ಬ'

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ನಗರದ ಗೌಳೇರ ಓಣಿ, ಗೋವೆರಹಳ್ಳಿ ಸೇರಿದಂತೆ ವಿವಿಧ ಹಳ್ಳಿಗಳಲ್ಲಿ ಗೌಳಿಗರು ಎಮ್ಮೆ ಬೆದರಿಸುವ ಸ್ಪರ್ಧೆ ಹಮ್ಮಿಕೊಳ್ಳುವ ಮೂಲಕ ದೀಪಾವಳಿಯನ್ನು ವಿಶಿಷ್ಟವಾಗಿ ಆಚರಿಸಿದರು.

ಪಾಂಡವರು 14 ವರ್ಷ ವನವಾಸ ಮುಗಿಸಿ ಕೌರವರಿಗೆ ಒಂದು ವರ್ಷ ಸಿಗದಂತೆ ವಿರಾಟರಾಜನ ಅರಮನೆಯಲ್ಲಿ ದನ ಕಾಯುತ್ತಾ, ಸಗಣಿ ಹೊರುತ್ತಾರೆ. ಇದರ ನೆನಪಿಗಾಗಿ ಗೌಳಿಗರು ಆಚರಿಸುವ ಪಾಂಡವರ ಹಬ್ಬ ದೀಪಾವಳಿಯಲ್ಲಿ ಗಮನ ಸೆಳೆಯುತ್ತದೆ. ಗೌಳಿಗರ ಮನೆಗಳಲ್ಲಿ ದಸರಾ ಹಬ್ಬದ ದಿನ ಅರಿಶಿಣದ ಘಟ ಸ್ಥಾಪಿಸುವ ಮೂಲಕ ಪಾಂಡವರ ಹಬ್ಬಕ್ಕೆ ಚಾಲನೆ ನೀಡುತ್ತಾರೆ. ಅಮವಾಸ್ಯೆ ದಿನ ಎಮ್ಮೆಗಳಿಗೆ ಮಜ್ಜನ ಮಾಡಿಸಿ,



ಮರುದಿನ ಎಮ್ಮೆಗಳಿಗೆ ಅರಿಶಿಣ, ನವಿಲುಗರಿ, ಕೊರಳ ಗೆಜ್ಜೆ, ಮುತ್ತಿನ ಹಾರ, ಕುಂಕುಮ ಲೇಪಿಸಿದಾಗ ಹಬ್ಬ ರಂಗೇರುತ್ತದೆ.

ಪುರಸಭೆ ಸದಸ್ಯ ಗೌಳಿ ವಿನಯ್ ಕುಮಾರ ಮಾತನಾಡಿ, ನಗರ ಪ್ರದೇಶ ಹಾಗೂ ಗೋವೆರಹಳ್ಳಿಯಲ್ಲಿ ಸರ್ಕಾರದ ಸವಲತ್ತುಗಳಿಂದ ವಂಚಿತರಾಗಿರುವ ಗೌಳಿಗರ ನೂರಾರು ಕುಟುಂಬಗಳು ಹಾಲು ಮಾರಿ ಜೀವನ ಕಂಡುಕೊಂಡಿದ್ದು, ಸರ್ಕಾರ ಇವರನ್ನು ಗುರುತಿಸಬೇಕು ಎಂದು ಒತ್ತಾಯಿಸಿದರು.

ವರ್ಷದ 365 ದಿನವೂ ಎಮ್ಮೆಗಳ ಪಾಲನೆ, ಪೋಷಣೆ ಮಾಡಿದ ವ್ಯಕ್ತಿಯನ್ನೇ ಎಮ್ಮೆಗಳು ಹಿಂಬಾಲಿಸುತ್ತವೆ. ಮಧ್ಯೆ ಕೆಲವರು ಪಟಾಕಿ ಸಿಡಿಸುತ್ತಾರೆ. ಇನ್ನೂ ಕೆಲವರು ಮಾಲೀಕನ ಮೇಲಿನ ಎಮ್ಮೆಯ ದೃಷ್ಟಿ ತಪ್ಪಿಸಲು ಆತನನ್ನೇ ಬಚ್ಚಿಡಲು ಮುಂದಾಗುತ್ತಾರೆ, ಆತನ ಶೈಲಿಯಲ್ಲಿಯೇ ಎಮ್ಮೆಯ ಗಮನ ಸೆಳೆಯುಲು ಯತ್ನಿಸುತ್ತಾರೆ. ಆದರೆ ಎಮ್ಮೆಗಳು ಮಾತ್ರ ಮಾಲೀಕನ ಕಂಠದಿಂದ ಹೊರ ಹೊಮ್ಮುವ ಧ್ವನಿಯನ್ನೇ ಹಿಂಬಾಲಿಸುತ್ತವೆ.

ಚಿನ್ನಾಭರಣ, ಬಟ್ಟೆ ಅಂಗಡಿಯೊಳಗೆ ಹೋದರೆ, ಎಮ್ಮೆಗಳೂ ಸಹ ಮಾಲಕನನ್ನೇ ಹಿಂಬಾಲಿಸುತ್ತವೆ. ಯಾವುದೇ ಅಪಾಯ ಮಾಡದೇ ಸುರಕ್ಷಿತವಾಗಿ ಹೊರಗಡೆ ಬರುತ್ತವೆ. ಒಂದು ಎಮ್ಮೆಗೆ ಕಣ್ಣಿಗೆ ಬಟ್ಟೆ ಕಟ್ಟುತ್ತಾರೆ, ಮಾಲಕ ದೂರ ನಿಂತು ಚಪ್ಪಾಳೆ ತಟ್ಟಿ, ಕೌ ಎನ್ನುತ್ತಿದ್ದಂತೆ ಎಮ್ಮೆ ಆತನಲ್ಲಿರುವಲ್ಲಿಗೆ ತೆರಳಿ ನೆರೆದವರಿಂದ ಚಪ್ಪಾಳೆ ಗಿಟ್ಟಿಸಿತು.

ಒಬ್ಬ ಯುವಕ ತನ್ನ ಬೈಕ್ ಮೇಲೆ ಮಾಲಕನನ್ನು ಕೂರಿಸಿಕೊಂಡು ಜೋರಾಗಿ ಬೈಕ್ ಓಡಿಸುತ್ತಾನೆ, ಬೈಕ್ ಹಿಂದೆಯೇ ಓಡುವ ಎಮ್ಮೆಗಳು ಮಾಲೀಕನ ಮೇಲಿನ ಪ್ರೀತಿ ತೋರಿಸುವ ದೃಶ್ಯ ರೋಮಾಂಚನಗೊಳಿಸಿತು. ಹೀಗೆ ವಿಶಿಷ್ಟ ಶೈಲಿಯಲ್ಲಿ ಎಮ್ಮೆಗಳ ಓಡಾಟ ವೀಕ್ಷಿಸಲು ನೂರಾರು ಜನರು ನೆರೆದಿದ್ದರು.

ಹೊಸ ಕಟ್ಟಿಗೆಯ ಎರಡು ತುಂಡುಗಳನ್ನು ತಂದು ಎಮ್ಮೆ ಕಟ್ಟುವ ಕೊಟ್ಟಿಗೆಯಲ್ಲಿ ನೆಟ್ಟು, ಸಗಣಿಯಿಂದ ತಯಾರಿಸಿದ ಪಾಂಡವರ ಘಟದ ಎದುರು ಸ್ಥಾಪಿಸಿದ ಒಲೆಯ ಮೇಲೆ ಹೊಸ ಮಡಕೆಯಲ್ಲಿ ಶಾವಿಗೆ, ಹಾಲು, ತುಪ್ಪ ಹಾಕಿ ಬೇಯಿಸುತ್ತೇವೆ. ಒಲೆಯ ಮೇಲೆ ಹಾಲು ಉಕ್ಕುತ್ತಿದ್ದಂತೆಯೇ ಆ ಬೆಂಕಿಯಲ್ಲಿ ಕಾದು ಕೆಂಡವಾಗಿರುವ ಸಲಾಕೆಯಿಂದ ಎಮ್ಮೆಗಳಿಗೆ ಗುಲ್ (ಮುದ್ರೆ) ಹಾಕುತ್ತೇವೆ. ದನ ಕಾಯುವ ವ್ಯಕ್ತಿ ಪಾಂಡವರ ಎಡೆಗೆ ಆರತಿ ಬೆಳಗಿದ ಬಳಿಕ ಎಮ್ಮೆ ಬೆದರಿಸಲಾಗುವುದು ಎಂದು ಗೌಳಿಗರ ಹಿರಿಯರಾದ ಸಾವಿತ್ರಮ್ಮ ಹಬ್ಬದ ಆಚರಣೆಯ ಬಗ್ಗೆ ಮಾಹಿತಿ ನೀಡಿದರು.

## ಸಾಹಿತ್ಯ ಸಮ್ಮೇಳನ ಅಧ್ಯಕ್ಷರಾಗಿ ಶೋಭಾ ಮೇಟಿ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಡಾ ವ್ಹಿ.ಬಿ. ಹಿರೇಮಠ ಮಹಾವೇದಿಕೆ, ಡಾ. ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನ ಗದಗ ಹಾಗೂ ಅಶ್ವಿನಿ ಪ್ರಕಾಶನ ಗದಗ ಇವರ ಸಯುಕ್ತಾಶ್ರಯದಲ್ಲಿ ನಡೆಯಲಿರುವ ಅಶ್ವಿನಿ ಪ್ರಕಾಶನದ 4ನೇ ಸಾಹಿತ್ಯ ಸಮ್ಮೇಳನ, 70ನೇ ಕನ್ನಡ ರಾಜ್ಯೋತ್ಸವ ಹಾಗೂ ಡಾ. ವ್ಹಿ.ಬಿ. ಹಿರೇಮಠರ 13ನೇ ಪುಣ್ಯಸ್ಮರಣೆ ಕಾರ್ಯಕ್ರಮಕ್ಕೆ ಮುಂಡರಗಿಯ ಶೋಭಾ ಬಸವರಾಜ ಮೇಟಿಯವರನ್ನು ಆಯ್ಕೆ ಮಾಡಲಾಗಿದೆ.

ಈ ಕಾರ್ಯಕ್ರಮ ನವೆಂಬರ್ 2ರಂದು ಕನಕದಾಸ ಶಿಕ್ಷಣ ಸಮಿತಿಯ ಕೆ.ಎಸ್.ಎಸ್. ಕಾಲೇಜು ಆವರಣದಲ್ಲಿ ನಡೆಯಲಿದೆ ಎಂದು ಅಧ್ಯಕ್ಷರು ಅಶ್ವಿನಿ ಪ್ರಕಾಶನ ಹಾಗೂ ಪ್ರತಿಷ್ಠಾನದ ಅಧ್ಯಕ್ಷರಾದ ಡಾ. ವ್ಹಿ.ವ್ಹಿ. ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿರ್ಲಕ್ಷ್ಯ ತೋರಿದ ತಹಸೀಲ್ದಾರ್‌ಗೆ ಕಡ್ಡಾಯ ರಜೆ.!

▶▶ಮೊದಲನೇ ಪುಟದಿಂದ

ಎಂದು ಮಾಡಿದ ಮನವಿಗೆ ಜಿಲ್ಲಾಧಿಕಾರಿಗಳು ಸ್ಪಂದಿಸಿದರು.

ಈ ವೇಳೆ ಅನ್ನಪೂರ್ಣ ಮಹಾಂತಶೆಟ್ಟರ, ಶಾರದಾ ಮಹಾಂತಶೆಟ್ಟರ, ದೇವೆಂದ್ರಪ್ಪ ಮರಳಿಹಳ್ಳಿ, ವಿರೂಪಾಕ್ಷಪ್ಪ ಅಣ್ಣಿಗೇರಿ, ಶಿವಯ್ಯ ಮಠಪತಿ, ಶರಣು ಗೋಡಿ, ಬಸವರಾಜ ಹೊಗೆಸೊಪ್ಪಿನ, ಮಂಜು ಮುಳಗುಂದ, ಹೊನ್ನಪ್ಪ ವಡ್ಡರ, ಮಂಜುನಾಥ ಗೌರಿ, ಫಕ್ಕಿರೇಶ ಕವಲೂರ, ಪ್ರವೀಣ ಬಾಳಿಕಾಯಿ, ಶಿವನಗೌಡ ಅಡರಕಟ್ಟಿ, ಗುರಪ್ಪ ಮುಳಗುಂದ, ಶಿವಜೋಗೆಪ್ಪ ಚಂದರಗಿ, ಬಸವಣ್ಣೆಪ್ಪ ನಂದೆಣ್ಣವರ, ಎಂ.ಡಿ. ಪಾಟೀಲ, ಮಲ್ಲಿಕಾರ್ಜುನ ನೀರಾಲೂಟಿ, ಪ್ರಕಾಶ ಕಮಡೊಳ್ಳಿ, ಶಂಕರ ಬ್ಯಾಡಗಿ, ಶಿವು ಕಟಗಿ, ಚಂದ್ರು ಮಾಗಡಿ, ಅನ್ನಪೂರ್ಣ ಮೇಟಿ, ಅರುಣಾ ಕಣವಿ ಸೇರಿ ಪಂಚಮಸಾಲಿ ಸಮಾಜ ಬಾಂಧವರು ವಿವಿಧ ಸಮಾಜ ಮತ್ತು ಸಂಘಟನೆಯವರು ಪಾಲ್ಗೊಂಡಿದ್ದರು.

## ಚಹಾಪುಡಿ ಅಂಗಡಿ ಮಾಲಿಕರು ಇನ್ನಿಲ್ಲ

▶▶ಮೊದಲನೇ ಪುಟದಿಂದ

ಅತ್ತೆಯ ಆರೋಗ್ಯ ಚಿಕಿತ್ಸೆ ವಿಷಯವಾಗಿ ಬೆಂಗಳೂರಿನ ನಾರಾಯಣ ಆಸ್ಪತ್ರೆಗೆ ತೆರಳಿದ್ದರು. ಇನ್ನೇನು ಬೆಂಗಳೂರು ಸಮೀಪಿಸುತ್ತಿರುವಾಗಲೇ ಭೀಕರ ಅಪಘಾತ ಸಂಭವಿಸಿ ದಂಪತಿಗಳು ಸಾವನ್ನಪ್ಪಿದ್ದು, ಅಳಿಯ ಬಸವರಾಜ, ಅತ್ತಿಗೆ ಅಣ್ಣಮ್ಮ, ಚಾಲಕ ಬಡಿಗೇರ ಎನ್ನುವರಿಗೆ ಗಂಭೀರ ಗಾಯಗಳಾಗಿರುವ ಬಗ್ಗೆ ತಿಳಿದುಬಂದಿದೆ. ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ರೋಣ ಪಟ್ಟಣ ಸೇರಿದಂತೆ ಕೃಷ್ಣಾಪೂರ ಗ್ರಾಮದಲ್ಲಿ ನೀರವ ಮೌನ ಆವರಿಸಿದೆ.

## ಕಸಾಪ ದತ್ತಿ ಉಪನ್ಯಾಸ ಇಂದು

▶▶ಮೊದಲನೇ ಪುಟದಿಂದ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಗಣ್ಯ ವ್ಯಾಪಾರಸ್ಥರಾದ ಕೊಟ್ರೇಶ ಮೇಲ್ಮುರಿ ಅವರು ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಜಿ ಸಚಿವ ಕಳಕಪ್ಪ ಬಂಡಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಿತ್ಯ ವಿಜಯ ಪ್ರತಿಷ್ಠಾನದ ಸಂಸ್ಥಾಪಕ, ಬಿಜೆಪಿಯ ರಾಜ್ಯ ವೈದ್ಯಕೀಯ ಪ್ರಕೋಷ್ಠದ ಸದಸ್ಯರಾದ ಡಾ. ಎಸ್.ವ್ಹಿ. ಶಿವನಗೌಡರ ಅವರ ನೇತೃತ್ವದ ತಂಡವು ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ಮತದಾರರಲ್ಲಿ ಜಾಗೃತಿ ಮೂಡಿಸುವ ಹಾಗೂ ಮತದಾರರ ಪಟ್ಟಿಗೆ ಹೊಸದಾಗಿ ನೋಂದಣಿ ಮಾಡಿಸುವ ಅಭಿಯಾನವನ್ನು ಗಜೇಂದ್ರಗಡ ತಾಲೂಕಿನಲ್ಲಿ ಕೈಗೊಂಡರು.

ಬಿಜೆಪಿಯ ನಾಯಕ, ಮಾಜಿ ಸಚಿವ ಕಳಕಪ್ಪ ಬಂಡಿ ಅವರನ್ನು ಗಜೇಂದ್ರಗಡದ ಅವರ ನಿವಾಸದಲ್ಲಿ ಭೇಟಿಯಾಗಿ ಚುನಾವಣೆ ಪ್ರಕ್ರಿಯೆ, ಮತದಾರರಲ್ಲಿ ಜಾಗೃತಿ ಹಾಗೂ ಮತದಾರರ ಪಟ್ಟಿಗೆ ಹೊಸದಾಗಿ ನೋಂದಣಿ ಕಾರ್ಯವನ್ನು ಚುರುಕುಗೊಳಿಸುವ ಕುರಿತು ಚರ್ಚಿಸಿದರು.

ಇದೇ ಸಂದರ್ಭದಲ್ಲಿ ಕಳಕಪ್ಪ ಬಂಡಿ ಅವರನ್ನು ತಂಡವು ಸನ್ಮಾನಿಸಿ ಗೌರವಿಸಿತು. ಈ ಸಂದರ್ಭದಲ್ಲಿ ತಂಡದ ಸದಸ್ಯರು, ಬಿಜೆಪಿಯ ಕಾರ್ಯಕರ್ತರು ಉಪಸ್ಥಿತರಿದ್ದರು.

## ಬೆಂಬಲ ಬೆಲೆ ಯೋಜನೆಯಡಿ ಹೆಸರು ನೋಂದಾಯಿಸಿಕೊಳ್ಳಲು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

2025ರ ಮುಂಗಾರು ಹಂಗಾಮಿನಲ್ಲಿ ಪ್ರಮುಖ ವಾಣಿಜ್ಯ ಬೆಳೆಯಾದ ಹತ್ತಿಯನ್ನು ಜಿಲ್ಲೆಯಲ್ಲಿ ಅಂದಾಜು 7000 ಹೆ. ಪ್ರದೇಶದಲ್ಲಿ ಬೆಳೆಯಲಾಗಿದೆ. ಪ್ರಸ್ತುತ ಹತ್ತಿ ಕೃಷಿ ಉತ್ಪನ್ನಕ್ಕೆ ಮಾರುಕಟ್ಟೆ ದರವು ಕಡಿಮೆಯಾಗಿರುದರಿಂದ ಕೇಂದ್ರ ಸರ್ಕಾರವು ಬೆಂಬಲ ಬೆಲೆ ಯೋಜನೆಯಡಿ ಮಧ್ಯಮ ಎಳೆ ಹತ್ತಿಗೆ ರೂ. 7,710 ಮತ್ತು ಉದ್ದನೆಯ ಎಳೆ ಹತ್ತಿಗೆ ರೂ. 8,110 ದರವನ್ನು ಘೋಷಿಸಿದೆ.

ಬೆಂಬಲ ಬೆಲೆ ಯೋಜನೆಯಡಿ ಹೆಸರು ನೋಂದಾಯಿಸಿಕೊಳ್ಳಲು ಅಕ್ಟೋಬರ್- 31 ಕೊನೆಯ ದಿನವಾಗಿದ್ದು, ಜಿಲ್ಲೆಯ ರೈತರು ಸದರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಭಾರತೀಯ ಹತ್ತಿ ನಿಗಮದ KAPAS Appನಲ್ಲಿ ಅ. 31ರೊಳಗಾಗಿ ನೋಂದಾಯಿಸಿಕೊಳ್ಳಲು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಅಥವಾ ಭಾರತೀಯ ಹತ್ತಿ ನಿಗಮದ ಗದಗ ಕಛೇರಿಯನ್ನು, ಜಿ. ರಮೇಶ (ಮೊಬೈಲ್ ಸಂಖ್ಯೆ: 7893429671) (ಭಾರತೀಯ ಹತ್ತಿ ನಿಗಮ), ರಮೇಶ ಜಿ.ಕೆ-96327 08161 (ಭಾರತೀಯ ಹತ್ತಿ ನಿಗಮ) ಸಂಪರ್ಕಿಸಲು ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

▶▶ಮೊದಲನೇ ಪುಟದಿಂದ

ನವೆಂಬರ್ 15 ಕೊನೆಯ ದಿನವಾಗಿದೆ.

ನಿಗದಿಪಡಿಸಿದ ಗುರಿ 1ನೇ ಟ್ರಂಚ್ 2839, 2ನೇ ಟ್ರಂಚ್ 1763, 3ನೇ ಟ್ರಂಚ್ 744 ಫಲಾನುಭವಿಗಳಿಗೆ ಸಾಲದ ಸೌಲಭ್ಯವನ್ನು ಒದಗಿಸಿಕೊಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿಯ ನಗರಭೆ ಕಾರ್ಯಾಲಯದ ಡೇ-ನಲ್ಮ ವಿಭಾಗದಲ್ಲಿ ಸಂಪರ್ಕಿಸಲು ಕೋರಿದೆ.

## ಸಚಿವ ಎಚ್ ಕೆ ಪಾಟೀಲ ಜಿಲ್ಲಾ ಪ್ರವಾಸ

▶▶ಮೊದಲನೇ ಪುಟದಿಂದ

ಬೆಳಗ್ಗೆ 11:30 ಗಂಟೆಗೆ ಟಾಂಗಾಕೂಟ ಹತ್ತಿರದಲ್ಲಿ ಗ್ಲೋಬಲ್ ಪ್ರಿಂಟ್ಸ್ ಮತ್ತು ಮೀಡಿಯಾ ಡಿಜಿಟಲ್ ಬ್ಯಾನರ್ ಪ್ರಿಂಟಿಂಗ್ ಪ್ರಾರಂಭೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು, ಮಧ್ಯಾಹ್ನ 12 ಗಂಟೆಗೆ ರಸ್ತೆ ಮೂಲಕ ಧಾರವಾಡಕ್ಕೆ ಪ್ರಯಾಣ ಬೆಳೆಸುವರು. ಮಧ್ಯಾಹ್ನ 1 ಗಂಟೆಗೆ ಧಾರವಾಡದ ವೀರಶೈವ ಲಿಂಗಾಯತ ಭವನದಲ್ಲಿ ಕರ್ನಾಟಕ ರಾಮಕೃಷ್ಣ ವಿವೇಕಾನಂದ ಭಾವ ಪ್ರಚಾರ ಪರಿಷತ್ತಿನ ಹನ್ನೊಂದನೇ ವಾರ್ಷಿಕ ಸಮ್ಮೇಳನದಲ್ಲಿ ಪಾಲ್ಗೊಳ್ಳುವರು. ನಂತರ ರಸ್ತೆ ಮೂಲಕ ಬೆಳಗಾವಿಗೆ ಪ್ರಯಾಣಿಸಿ ಅಲ್ಲಿಂದ ಹೈದರಾಬಾದಿಗೆ ವಿಮಾನದ ಮೂಲಕ ತೆರಳಿ ಹೈದರಾಬಾದಲ್ಲಿ ವಾಸ್ತವ್ಯ ಮಾಡುವರು.

ಅಕ್ಟೋಬರ್ 27ರಂದು ಬೆಳಗ್ಗೆ 11.30 ಗಂಟೆಗೆ ಹೈದರಾಬಾದ್ ನಿಂದ ವಿಮಾನದ ಮೂಲಕ ಹುಬ್ಬಳ್ಳಿಗೆ ಆಗಮಿಸಿ ಅಲ್ಲಿಂದ ರಸ್ತೆ ಮೂಲಕ ಗದಗ ಪ್ರಯಾಣ ಬೆಳೆಸುವರು. ಸಾಯಂಕಾಲ 4 ಗಂಟೆಗೆ ನಗರದ ಮುಳಗುಂದ ರಸ್ತೆಯ ಸಿದ್ದಗಂಗಾ ನಗರದಲ್ಲಿ ಶ್ರೀ ದುರ್ಗಾ ಪರಮೇಶ್ವರಿ ದೇವಸ್ಥಾನದ ನೂತನ ಕಟ್ಟಡ ಲೋಕಾರ್ಪಣೆ ಹಾಗೂ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗದಗನಲ್ಲಿ ವಾಸ್ತವ್ಯ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಅಗತ್ಯ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಧಾರವಾಡ ಜಿಲ್ಲೆಯಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡಿಕೊಳ್ಳಲು ಮತದಾರರ ಜಾಗೃತಿಗಾಗಿ ಅಗತ್ಯ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಪಶ್ಚಿಮ ಪದವೀಧರ ಕ್ಷೇತ್ರದ ಧಾರವಾಡ ಜಿಲ್ಲಾ ಸಹಾಯಕ ಮತದಾರರ ನೋಂದಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.



ಅವರು ಶುಕ್ರವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಗಂಣದಲ್ಲಿ ಜರುಗಿದ ಪಶ್ಚಿಮ ಪದವೀಧರ ಮತಕ್ಷೇತ್ರದ ಮತದಾರರ ನೋಂದಣಿಗೆ ಸಂಬಂಧಿಸಿದಂತೆ ವಿಡಿಯೋ ಸಂವಾದದಲ್ಲಿ ಭಾಗವಹಿಸಿ, ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ, ಮಾತನಾಡಿದರು. ಸಹಾಯಕ ಮತದಾರರ ನೋಂದಣಾಧಿಕಾರಿಗಳು ಮತ್ತು ನಿಯೋಜಿತ ಅಧಿಕಾರಿಗಳು ಮತದಾರರ ಪಟ್ಟಿಗೆ ಸೇರಲು ಅರ್ಹ ಮತದಾರರನ್ನು ಗುರುತಿಸಿ, ಶೀಘ್ರವಾಗಿ ಅರ್ಹ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಲು ಕ್ರಮ ವಹಿಸಬೇಕು. ಜಿಲ್ಲೆಯಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿನ ಶಿಕ್ಷಕರು ಪದವೀಧರರಿದ್ದರೆ, ಅಂತಹ ಶಿಕ್ಷರು ಅರ್ಜಿಗಳನ್ನು ಭರ್ತಿ ಮಾಡುವಂತೆ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕ್ರಮವಹಿಸಬೇಕು ಎಂದು ಹೇಳಿದರು.

ತಹಸೀಲ್ದಾರರು ಜಿಲ್ಲೆಯಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಭೇಟಿ ನೀಡಿ, ಎಲ್ಲ ಪದವೀಧರರಿಗೆ ಚುನಾವಣೆಯ ಬಗ್ಗೆ ಮಾಹಿತಿ ನೀಡಿ, ವಿಶ್ವವಿದ್ಯಾಲಯಗಳಲ್ಲಿನ ಪದವೀಧರನ್ನು ಸಂಪರ್ಕಿಸುವ ಕಾರ್ಯ ಮಾಡಬೇಕು ಎಂದು ಹೇಳಿದರು. ಸಭೆಯಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಉಪ ವಿಭಾಗಾಧಿಕಾರಿ ಶಾಲಂ ಹುಸೇನ, ಎಲ್ಲಾ ತಾಲೂಕುಗಳ ತಹಸೀಲ್ದಾರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ವಕ್ಫ್ ಆಸ್ತಿಗಳ ನೋಂದಣಿ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ವಕ್ಫ್ ಕಾಯ್ದೆ-2025ರ ಪ್ರಕಾರ ಎಲ್ಲ ವಕ್ಫ್ ಸಂಸ್ಥೆಗಳ ಮುತವಲ್ಲಿಗಳು/ಅಧ್ಯಕ್ಷರು ತಮ್ಮ ವಕ್ಫ್ ಸಂಸ್ಥೆಯ ವಕ್ಫ್ ಆಸ್ತಿಗಳ ಮಾಹಿತಿಯನ್ನು UW-MEED ಪೋರ್ಟಲ್‌ನಲ್ಲಿ ಡಿಸೆಂಬರ್ 6ರ ಒಳಗಾಗಿ ನೋಂದಾಯಿಸುವುದು ಕಡ್ಡಾಯವಾಗಿರುತ್ತದೆ.

ಈ ಕುರಿತು ಅ. 28ರಂದು ಧಾರವಾಡ ಮತ್ತು ಗದಗ ಜಿಲ್ಲೆಗಳ ಮುತವಲ್ಲಿ ಹಾಗೂ ವಕ್ಫ್ ಸಂಸ್ಥೆಗಳ ಅಧ್ಯಕ್ಷರಿಗೆ ಹುಬ್ಬಳ್ಳಿಯ ಅಂಜುಮನ್ ಶಾದಿಮಹಲ್‌ನಲ್ಲಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಎಲ್ಲ ಮುತವಲ್ಲಿ ಹಾಗೂ ವಕ್ಫ್ ಸಂಸ್ಥೆಗಳ ಅಧ್ಯಕ್ಷರು ಈ ಕಾರ್ಯಾಗಾರದಲ್ಲಿ ತಪ್ಪದೇ ಹಾಜರಾಗಬೇಕೆಂದು ಗದಗ ಜಿಲ್ಲಾ ವಕ್ಫ್ ಅಧಿಕಾರಿಗಳು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ವಕ್ಫ್ ಅಧಿಕಾರಿ ತೌಸಿಫ ಮಕಾನದಾರ-9743164164 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

## ನಿಧನ

### ಶಾಂತವ್ವ ಮುಕ್ಕಣ್ಣವರ




**ಗದಗ:** ಸ್ಥಳೀಯ ವಿವೇಕಾನಂದ ನಗರದ ಸಾಯಿಬಾಬಾ ದೇವಸ್ಥಾನದ ಹತ್ತಿರದ ನಿವಾಸಿ ಶಾಂತವ್ವ ಕೋಂ. ಮಲ್ಲಿಕಾರ್ಜುನ ಮುಕ್ಕಣ್ಣವರ (64) ಗುರುವಾರ ಸಾಯಂಕಾಲ ನಿಧನರಾದರು. ಮೃತರು ಪುತ್ರ, ಪುತ್ರಿ, ಸೊಸೆ, ಮೊಮ್ಮಕ್ಕಳು, ಸಹೋದರರು, ಸಹೋದರಿಯರು ಸೇರಿ ಅಪಾರ ಬಂಧು-ಬಳಗ ಅಗಲಿದ್ದಾರೆ.

## ಬೆಂಗಳೂರು ಚಲೋ ಅ.27ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಹರಪನಹಳ್ಳಿ ರೈಲು ಮಾರ್ಗ 2014ರ ರೈಲ್ವೆ ಮುಂಗಡ ಪತ್ರದಲ್ಲಿ ಮಂಜೂರಾತಿ ಆಗಿದ್ದು, 2015ರಲ್ಲಿ ಕೇಂದ್ರ ರೈಲ್ವೆ ಬೋರ್ಡ್‌ನವರು ಸರ್ವೆ ಮಾಡಿ, ವೆಚ್ಚದಾಯಕವಾದ ಯೋಜನೆಯನ್ನು ಕೇಂದ್ರ ರೇಲ್ವೆ ಕಚೇರಿಯವರು ಕಾಯ್ದಿರಿಸಿದ್ದಾರೆ. ಆದರೆ ಈ ಸರ್ವೆ ವರದಿಯು ಅವೈಜ್ಞಾನಿಕವಾಗಿದೆ. ಗದಗ-ಹರಪನಹಳ್ಳಿ ರೈಲು ಮಾರ್ಗವನ್ನು ಮುಂಡರಗಿ-ಹೂವಿನಹಡಗಲಿ ಮಾರ್ಗವಾಗಿ ಅನುಷ್ಠಾನಗೊಳಿಸಲು ಆಗ್ರಹಿಸಿ ಬೆಂಗಳೂರು ಚಲೋ ಪ್ರತಿಭಟನೆ ಹಮ್ಮಿಕೊಂಡಿದ್ದೇವೆ ಎಂದು ಮುಂಡರಗಿ ತಾಲೂಕು ರೈಲ್ವೆ ಹೋರಾಟ ಸಮಿತಿ ಅಧ್ಯಕ್ಷ ಬಸವರಾಜ ಶ.ದೇಸಾಯಿ ಮತ್ತು ಗದಗ-ಹರಪನಹಳ್ಳಿ ರೈಲ್ವೆ ಮಾರ್ಗ ಜಂಟಿ ಕ್ರಿಯಾಸಮಿತಿ ಸಂಸ್ಥಾಪಕ ಅಧ್ಯಕ್ಷ ಬಸವರಾಜ ಯಲ್ಲಪ್ಪ ನವಲಗುಂದ ತಿಳಿಸಿದರು.



ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಆಡಳಿತ ನಡೆಸಿದ ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ಪಕ್ಷಗಳು ಜನರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದರಲ್ಲಿ ಸಂಪೂರ್ಣ ವಿಫಲವಾಗಿವೆ. ಮುಂಡರಗಿ, ಹೂವಿನಹಡಗಲಿ ಮಾರ್ಗವಾಗಿ ಅನುಷ್ಠಾನಗೊಳಿಸಲು ಆಗ್ರಹಿಸಿ ಅ. 27ರಂದು ಗದಗ-ಬೆಟಗೇರಿ ರೈಲ್ವೆ ನಿಲ್ದಾಣದ ಮುಖಾಂತರ ಬೆಂಗಳೂರಿಗೆ ರೈಲ್ವೆ ಪ್ರತಿಭಟನೆ ರ್‍ಯಾಲಿಯು ತೆರಳಿ, ಅ. 28ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿ ಮುಖ್ಯಮಂತ್ರಿಗಳ ಮುಖಾಂತರ ಪ್ರಧಾನಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಗುವುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಉತ್ತರ ಕರ್ನಾಟಕ ಪ್ರದೇಶ ರೈತ ಸಂಘದ ವ್ಹಿ.ಎಸ್. ಗಟ್ಟಿ, ಕಿಸಾನ್ ಜಾಗೃತಿ ವಿಕಾಸ ಜಿಲ್ಲಾ ಘಟಕದ ಧ್ರುವಕುಮಾರ ಹೂಗಾರ, ನಿಂಗಪ್ಪ ಭಂಡಾರಿ, ಕರಿಯಲ್ಲನಗೌಡ್ರ ಮುಂತಾದವರು ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನಿಮ್ಹಾನ್ಸ್ ಬೆಂಗಳೂರು, ನೆಹರು ಯುವಕೇಂದ್ರ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ, ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ಲಯನ್ಸ್ ಶಿಕ್ಷಣ ಸಂಸ್ಥೆ ಇವರುಗಳ ಸಹಯೋಗದಲ್ಲಿ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ–2025, ಜೀವನ ಕೌಶಲ್ಯ ತರಬೇತಿ ಮತ್ತು ಯುವ ಕಾರ್ಯಾಗಾರವನ್ನು ನಗರದ ಮುಂಡರಗಿ ರಸ್ತೆಯಲ್ಲಿನ ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದಲ್ಲಿ ಅ. 25ರಂದು ಬೆಳಿಗ್ಗೆ 9 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

15ರಿಂದ 29 ವರ್ಷ ವಯೋಮಾನದವರು ಇದರಲ್ಲಿ ಅಧಿಕೃತ ಪ್ರಮಾಣ ಪತ್ರಗಳೊಂದಿಗೆ ಭಾಗವಹಿಸಬಹುದು. ತೀರ್ಪುಗಾರರ ತೀರ್ಮಾನವೇ ಅಂತಿಮ. ವಿಜೇತರಿಗೆ ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದು. ಮಾನ್ಯ ಸಚಿವರು, ಶಾಸಕರು, ಸಂಸದರು, ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಗಣ್ಯರು ಭಾಗವಹಿಸುವ ಈ ಉತ್ಸವದಲ್ಲಿ ಯುವ ಜನತೆ ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯದ ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಸಂಸ್ಥೆಯ ನಿರ್ದೇಶಕರಾದ ಪ್ರೊ. ಪುನೀತ ದೇಶಪಾಂಡೆ, ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ ಒಡೆಯರ್, ಪ್ರೊ. ಸಯ್ಯದ್ ಮತೀನ್ ಮುಲ್ಲಾ ಸೇರಿದಂತೆ ಮಹಾವಿದ್ಯಾಲಯದ ಸಿಬ್ಬಂದಿಗಳು ಕೋರಿದ್ದಾರೆ.

**ಕರ್ನಾಟಕ ರಾಮಕೃಷ್ಣ–ವಿವೇಕಾನಂದ ಭಾವಪ್ರಚಾರ ಪರಿಷತ್ತಿನ ವಾರ್ಷಿಕ ಸಮ್ಮೇಳನದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್**

# ವಿವೇಕಾನಂದರ ಆದರ್ಶಗಳಿಂದ ಸ್ಫೂರ್ತಿ ಪಡೆಯಿರಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಭಾರತವು ಆಧ್ಯಾತ್ಮಿಕವಾಗಿ ಜಾಗೃತಗೊಂಡು ಸಾಂಸ್ಕೃತಿಕವಾಗಿ ಬಲಿಷ್ಠ ಮತ್ತು ಆಧುನಿಕ ಪ್ರಗತಿಯಿಂದ ಸಮೃದ್ಧವಾಗಬೇಕೆಂದು ಸ್ವಾಮಿ ವಿವೇಕಾನಂದರು ಬಯಸಿದ್ದರು. ಯುವಜನತೆ ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ತಮ್ಮ ಜೀವನ ಮಂತ್ರವನ್ನಾಗಿ ಮಾಡಿಕೊಂಡು ದೇಶದ ಅಭಿವೃದ್ಧಿಯಲ್ಲಿ ಪಾಲ್ಗೊಳ್ಳಬೇಕು ಎಂದು ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಹೇಳಿದರು.

ಧಾರವಾಡದ ಅಖಿಲ ಭಾರತ ವೀರಶೈವ ಲಿಂಗಾಯುತ ಮಹಾಸಭಾ ಭವನದಲ್ಲಿ ಧಾರವಾಡ ರಾಮಕೃಷ್ಣ ವಿವೇಕಾನಂದ ಆಶ್ರಮದಿಂದ ಆಯೋಜಿಸಿದ್ದ ಕರ್ನಾಟಕ ರಾಮಕೃಷ್ಣ–ವಿವೇಕಾನಂದ ಭಾವಪ್ರಚಾರ ಪರಿಷತ್ತಿನ 11ನೇ



ವಾರ್ಷಿಕ ಸಮ್ಮೇಳನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸ್ವಾಮಿ ವಿವೇಕಾನಂದರಂತೆ ಪ್ರತಿಯೊಬ್ಬ ಯುವಕರು ಆತ್ಮವಿಶ್ವಾಸ, ತ್ಯಾಗ ಮತ್ತು ಸೇವಾ ಮನೋಭಾವವನ್ನು ಹೊಂದಿದ್ದರೆ ಮತ್ತು ಸಕಾರಾತ್ಮಕ ಕಾರ್ಯಗಳು, ನಾವೀನ್ಯತೆ ಮತ್ತು ರಾಷ್ಟ್ರೀಯ ಸೇವೆಗೆ ತಮ್ಮ ಶಕ್ತಿಯನ್ನು ವಿನಿಯೋಗಿಸಿದರೆ, ಭಾರತ ಮತ್ತೊಮ್ಮೆ ವಿಶ್ವಗುರು ಆಗಬಹುದು ಎಂದು ಅಭಿಪ್ರಾಯಪಟ್ಟರು.

ಶ್ರೀ ರಾಮಕೃಷ್ಣರು ಆತ್ಮಸಾಕ್ಷಾತ್ಕಾರದ ಪ್ರಕಾಶಮಾನವಾದ ಸೂರ್ಯನಾಗಿದ್ದರು. ಅವರು ತಮ್ಮ ಜೀವನದ ಮೂಲಕ, ಶುದ್ಧತೆ, ತಾಳ್ಮೆ ಮತ್ತು ನಿಸ್ವಾರ್ಥ ಪ್ರೀತಿ ನಿಜವಾದ ಧರ್ಮವನ್ನು ರೂಪಿಸುತ್ತದೆ ಎಂದು ಕಲಿಸಿದರು. ತಮ್ಮ ಮಾತೃ ಪ್ರೀತಿ ಮತ್ತು ಮೌನ ಸೇವೆಯ ಮೂಲಕ, ಅವರು ಅಸಂಖ್ಯಾತ ಜನರ ಪ್ರಗತಿಗೆ ದಾರಿ ಮಾಡಿಕೊಟ್ಟರು. ಸ್ವಾಮಿ ವಿವೇಕಾನಂದರು ಭಾರತದ ಶ್ರೇಷ್ಠ ತತ್ವಜ್ಞಾನಿ, ಸಂತ ಮತ್ತು ಯುವ ಸ್ಫೂರ್ತಿಯಾಗಿದ್ದರು. ಅವರು ತಮ್ಮ ಗುರುಗಳ ಸಂದೇಶವನ್ನು ದಕ್ಷಿಣೇಶ್ವರದ ಸಣ್ಣ ದೇವಾಲಯದಿಂದ ಚಿಕಾಗೋದ ವಿಶ್ವ ಧರ್ಮ ಸಂಸತ್ತಿನ ವೇದಿಕೆಗೆ ಕೊಂಡೊಯ್ದರು ಎಂದು ಹೇಳಿದರು.

ಪ್ರಸ್ತುತ ಯುವಕರಿಗೆ ಜ್ಞಾನ, ತಂತ್ರಜ್ಞಾನ ಮತ್ತು ಅವಕಾಶಗಳ ಕೊರತೆಯಿಲ್ಲ. ಅವರು ವಿವೇಕಾನಂದರ ಆದರ್ಶಗಳಿಂದ ಸ್ಫೂರ್ತಿ ಪಡೆಯಬೇಕು ಮತ್ತು ಜೀವನದಲ್ಲಿ ಉತ್ತಮ ವ್ಯಕ್ತಿತ್ವ, ಶಿಸ್ತು ಮತ್ತು ಸಮಗ್ರತೆಯನ್ನು ಅಳವಡಿಸಿಕೊಳ್ಳಬೇಕು. ಸಮಾಜದಲ್ಲಿ ಭೌತಿಕ ಪ್ರಗತಿಯ ಜೊತೆಗೆ ಮಾನಸಿಕ ಅಶಾಂತಿ ಹೆಚ್ಚುತ್ತಿರುವಾಗ, ಈ ಮಹಾನ್ ವ್ಯಕ್ತಿಗಳ ಸಂದೇಶಗಳು ನಮಗೆ ಮಾರ್ಗದರ್ಶನ ನೀಡುತ್ತವೆ ಎಂದು ಹೇಳಿದರು.

ಸಮಾರಂಭದಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ಮೈಸೂರಿನ ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಪರಮಪೂಜ್ಯ ಸ್ವಾಮಿ ಮುಕ್ತಿದಾನಂದ ಮಹಾರಾಜ್, ರಾಮಕೃಷ್ಣ ಆಶ್ರಮ ಗದಗ–ವಿಜಯಪುರದ ಸ್ವಾಮಿ ನಿರ್ಭಯಾನಂದ ಸರಸ್ವತಿ, ಹುಬ್ಬಳ್ಳಿ ಮೂರುಸಾವಿರ ಮಠದ ಪರಮಪೂಜ್ಯ ಡಾ. ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿಗಳು, ಶಾಸಕ ಅರವಿಂದ ಬೆಲ್ಲದ ಸೇರಿದಂತೆ ಇತರರು ಮಾತನಾಡಿದರು.

> ರಾಮಕೃಷ್ಣ–ವಿವೇಕಾನಂದ ಭಾವಪ್ರಚಾರ ಪರಿಷತ್ತು ಕೇವಲ ಒಂದು ಸಂಸ್ಥೆ ಮಾತ್ರವಲ್ಲದೆ ಪ್ರಜ್ಞೆ ಮತ್ತು ಜಾಗೃತಿಯ ಚಳುವಳಿಯಾಗಿದ್ದು, ಸಮಾಜವನ್ನು ಕತ್ತಲೆಯಿಂದ ಬೆಳಕಿನೆಡೆಗೆ, ಅಜ್ಞಾನದಿಂದ ಜ್ಞಾನದೆಡೆಗೆ ಮತ್ತು ದ್ವೇಷದಿಂದ ಪ್ರೀತಿ ಮತ್ತು ಅಮರತ್ವದೆಡೆಗೆ ಕರೆದೊಯ್ಯಲು ಕೆಲಸ ಮಾಡುತ್ತದೆ. ಈ ಸಂಸ್ಥೆಯು ಶಿಕ್ಷಣ, ಆರೋಗ್ಯ, ಗ್ರಾಮೀಣ ಸೇವೆ ಮತ್ತು ವಿಪತ್ತು ಪರಿಹಾರ ಕ್ಷೇತ್ರಗಳಲ್ಲಿ ಗಮನಾರ್ಹ ಕೊಡುಗೆಗಳನ್ನು ನೀಡುತ್ತಿದೆ ಎಂದು ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಹೇಳಿದರು.

# ಮತದಾರರ ನೋಂದಣಿ ಅತ್ಯಗತ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ವ್ಯಾಪ್ತಿಗೆ ಒಳಪಡುವ ಸಮಸ್ತ ಪದವೀಧರರು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸೇರಿಸುವುದು, ಮರು ನೋಂದಣಿ ಹಾಗೂ ಅರ್ಹ ಪದವೀಧರರು ಹೊಸದಾಗಿ ನೋಂದಣಿ ಮಾಡಿಕೊಳ್ಳಬೇಕು ಎಂದು ಗದುಗಿನ ನಿತ್ಯ ವಿಜಯ ಪ್ರತಿಷ್ಠಾನದ ಸಂಸ್ಥಾಪಕ, ಬಿಜೆಪಿಯ ರಾಜ್ಯ ವೈದ್ಯಕೀಯ ಪ್ರಕೋಷ್ಠದ ಸದಸ್ಯ ಡಾ. ಎಸ್.ವ್ಹಿ. ಶಿವನಗೌಡರ ಪದವೀಧರರಲ್ಲಿ ಮನವಿ ಮಾಡಿಕೊಂಡರು.

ಅವರು ನರೇಗಲ್ಲ ಪಟ್ಟಣದ ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಯ ಉಪನ್ಯಾಸಕ, ಶಿಕ್ಷಕ ವೃಂದವನ್ನು ಭೇಟಿ ಮಾಡಿ ಮತದಾರರಲ್ಲಿ ಜಾಗೃತಿ ಮೂಡಿಸುವ ಹಾಗೂ ಮತದಾರರ ಪಟ್ಟಿಗೆ ಹೊಸದಾಗಿ ನೋಂದಣಿ ಮಾಡುವ ಅಭಿಯಾನ ಮಾಲಿಕೆಯಲ್ಲಿ ಮಾತನಾಡಿದರು.

ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ಕಳೆದ ಚುನಾವಣೆಯಲ್ಲಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಂಡು ಮತದಾನ ಮಾಡಿದವರು ನವೆಂಬರ್ 6ರೊಳಗೆ ಮರು ನೋಂದಣಿ ಮಾಡಿಕೊಳ್ಳಬೇಕು. ನವೆಂಬರ್ 1, 2022ಕ್ಕಿಂತ ಮೊದಲು ತೇರ್ಗಡೆ ಹೊಂದಿದ ಎಲ್ಲ ಪದವೀಧರರು ಮತದಾನಕ್ಕೆ ಅರ್ಹರಾಗಿದ್ದು, ಅವರು ಹೊಸದಾಗಿ ಅಗತ್ಯ ದಾಖಲಾತಿಯೊಂದಿಗೆ ನಿಗದಿತ ಅರ್ಜಿ ಫಾರ್ಮ್ ಭರ್ತಿ ಮಾಡಿ ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಯ ಉಪನ್ಯಾಸಕರು, ಶಿಕ್ಷಕರು ಹಾಗೂ ತಂಡದ ಸದಸ್ಯರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಲು ಅವಕಾಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತ ಚುನಾವಣಾ ಆಯೋಗದದನ್ವಯ ಕರ್ನಾಟಕ ವಿಧಾನ ಪರಿಷತ್ತಿನ ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರಕ್ಕೆ ಅರ್ಹತಾ ದಿನಾಂಕವಾಗಿ 01–11–2025ನ್ನು ನಿಗದಿಪಡಿಸಿ ಮತದಾರರ ಪಟ್ಟಿಯ ತಯಾರಿಕೆಯ ವೇಳಾಪಟ್ಟಿಯನ್ನು ಹೊರಡಿಸಿದ್ದು, ಅದರಂತೆ ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ ERO, AERO & Designated Officer ವಿವರಗಳನ್ನು ಪ್ರಚುರಪಡಿಸಲಾಗಿದೆ.

ಕರ್ನಾಟಕ ವಿಧಾನ ಪರಿಷತ್ತಿನ ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರ ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಲು ಅರ್ಜಿದಾರರು ಭಾರತ ಪ್ರಜೆಯಾಗಿರುವ, ಅಯಾ ಮತಕ್ಷೇತ್ರದೊಳಗೆ ಸಾಮಾನ್ಯವಾಗಿ ವಾಸಿಸುತ್ತಿರುವ ಹಾಗೂ 1ನೇ ನವೆಂಬರ್ 2025ಕ್ಕೆ ಮುಂಚೆ ಕನಿಷ್ಠ ಮೂರು ವರ್ಷಗಳ ಮೊದಲು ಭಾರತದಲ್ಲಿರುವ ಯಾವುದಾದರೊಂದು 2 ವಿಶ್ವವಿದ್ಯಾಲಯದ ಪದವೀಧರನಾಗಿರುವ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರುವ ಪ್ರತಿಯೊಬ್ಬ ವ್ಯಕ್ತಿಯೂ ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ.

ಈ ಎಲ್ಲಾ ದಾಖಲಾತಿಯೊಂದಿಗೆ ನಮೂನೆ–18ರಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಸಹಾಯಕ ಮತದಾರರ ನೋಂದಣಾಧಿಕಾರಿ ಹಾಗೂ ತಹಸೀಲ್ದಾರ ಗದಗ ಮತ್ತು ಸಹಾಯಕ ಮತದಾರರ ನೋಂದಣಾಧಿಕಾರಿ ಹಾಗೂ ಪೌರಾಯುಕ್ತರು, ಗದಗ–ಬೆಟಗೇರಿ ನಗರಸಭೆ ಇವರ ಕಾರ್ಯಾಲಯದಲ್ಲಿ ನಮೂನೆ–18ನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಗದಗ ತಹಸೀಲ್ದಾರರ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ 08372–250009ಕ್ಕೆ ಕರೆ ಮಾಡಬಹುದಾಗಿದೆ ಎಂದು ಗದಗ ತಹಸೀಲ್ದಾರರ ಕಾರ್ಯಾಲಯ (ಚುನಾವಣೆ ವಿಭಾಗ)ದ ಪ್ರಕಟಣೆ ತಿಳಿಸಿದೆ.

# ಪದವಿ ಪೂರ್ವ ಮಹಾವಿದ್ಯಾಲಯಗಳ ಕ್ರೀಡಾಕೂಟದ ಉದ್ಘಾಟನಾ ಸಮಾರಂಭ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, (ಪದವಿ ಪೂರ್ವ), ತೋಂಟದ ಸಿದ್ಧೇಶ್ವರ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಪದವಿ ಪೂರ್ವ ಮಹಾವಿದ್ಯಾಲಯ ಇವರ ಸಹಯೋಗದಲ್ಲಿ ಗದಗ ಜಿಲ್ಲಾ ಮಟ್ಟದ 2025–26ನೇ ಸಾಲಿನ ಪದವಿ ಪೂರ್ವ ಮಹಾವಿದ್ಯಾಲಯಗಳ ಕ್ರೀಡಾಕೂಟದ ಉದ್ಘಾಟನಾ ಸಮಾರಂಭವನ್ನು ಅ. 25ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ. ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ವಿ.ಪ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸುವರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿದ್ಧಲಿಂಗ ಮಸನಾಯಕ, ಜಗದ್ಗುರು ತೋಂಟದಾರ್ಯ ವಿದ್ಯಾಪೀಠ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ, ಜಿಲ್ಲಾ ಕ್ರೀಡಾ ಸಂಚಾಲಕ ಎಚ್.ಎಸ್. ಶಿವಪ್ಪಯ್ಯನಮಠ, ತೋಂಟದ ಸಿದ್ಧೇಶ್ವರ ಪ.ಪೂ ಮಹಾವಿದ್ಯಾಲಯದ ಪ್ರಾಚಾರ್ಯ ಯೋಗೇಶ ಕುಮಾರ್ ಮತ್ತೂರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

> ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಕೆ.ಎಮ್. ಜಾನಕಿ, ಜಿಲ್ಲಾಧಿಕಾರಿ ಮತ್ತು ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಆಗಮಿಸುವರು.


# ಉದ್ಯಮ ಶೀಲತಾ ಅಭಿವೃದ್ಧಿ ತರಬೇತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಇವರ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ ( ಸಿಡಾಕ್ ) , ಧಾರವಾಡ ಇವರು ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಛಿಸುವ ಎಲ್ಲ ವರ್ಗದ ಆಸಕ್ತ ಮಹಿಳಾ ಮತ್ತು ಪುರುಷರಿಗೆ 10 ದಿನಗಳ ಉದ್ಯಮ ಶೀಲತಾ ಅಭಿವೃದ್ಧಿ ತರಬೇತಿಯನ್ನು ನವೆಂಬರ್ ತಿಂಗಳಿನ ಮೊದಲನೇ ವಾರದಲ್ಲಿ ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳ, ಗದಗನಲ್ಲಿ ಹಮ್ಮಿಕೊಳ್ಳಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಜಿಲ್ಲಾ ಕಚೇರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ಆವರಣ, ರೂಂ ನಂ. 106, ಜಿಲ್ಲಾ ಆಡಳಿತ ಭವನ, ಗದಗ ; ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳ, ದೊಡ್ಡ ಗಡಿಯಾರದ ಹತ್ತಿರ, ಗದಗ ಸಂಪರ್ಕಿಸಬಹುದಾಗಿದೆ.

# ಅ.28ರಂದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 28 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ವಿ.ಸಿ. ಹಾಲ್‌ದಲ್ಲಿ ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಲಿದೆ ಎಂದು ಗದಗ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ದಾಸವಾಣಿ' ಕಾರ್ಯಕ್ರಮ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಾಹಿತ್ಯ ಕಲಾ ವೇದಿಕೆಯ ವಿಶೇಷ ಕಾರ್ಯಕ್ರಮದಲ್ಲಿ ಈ ತಿಂಗಳು ದಾಸವಾಣಿ ಕಾರ್ಯಕ್ರಮ ಅ.26ರಂದು ಸಾಯಂಕಾಲ 6 ಗಂಟೆಗೆ ಬೆಟಗೇರಿಯ ಚಿದಂಬರ ಆಶ್ರಮ ಹತ್ತಿರವಿರುವ ಶ್ರೀ ಅರುಣ ರಾಜಪುರೋಹಿತರ ನಿವಾಸದಲ್ಲಿ ನೆರವೇರಲಿದೆ.

ಪ್ರಸಿದ್ಧ ಗಾಯಕರಾದ ಡಾ. ಹರೀಶ ಹೆಗಡೆಯವರ ಶಿಷ್ಯರಾದ ನರೇಗಲ್ಲಿನ ಗೀತಾ ಭೋಪಾಳಾಪೂರ ದಾಸವಾಣಿ ಕಾರ್ಯಕ್ರಮ ನಡೆಸಿಕೊಡುವವರು. ಶ್ರೀರಾಮು ಕೊಡೇಕಲ್ ಸಂವಾದಿನಿ ಹಾಗೂ ಕನ್ನಯ್ಯ ಕೊಡೇಕಲ್ ತಬಲಾ ಸಾಥ್ ನೀಡುವರು. ಸರ್ವರಿಗೂ ಸಾಹಿತ್ಯ ಕಲಾ ವೇದಿಕೆಯ ಸದಸ್ಯರು ಸ್ವಾಗತ ಕೋರಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊ–8277367006 ಅಥವಾ 9731455221 ಸಂಪರ್ಕಿಸಲು ಕೋರಲಾಗಿದೆ.

**ಸನ್ಮಾರ್ಗ ಪದವಿ ಮಹಾವಿದ್ಯಾಲಯದಲ್ಲಿ ಆಯ್ಕೆ ಸ್ಪರ್ಧೆ ಇಂದು**

# ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆ

**■ವಿಜಯಸಾಕ್ಷಿ ಸುದ್ದಿ, ಗದಗ**

2025–26ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಸ್ಪರ್ಧೆಯನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ, ಲಾಯನ್ಸ್ ಶಿಕ್ಷಣ ಸಂಸ್ಥೆ ಹಾಗೂ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯ ಗದಗ ಇವರ ಸಹಯೋಗದೊಂದಿಗೆ ಅ. 25ರಂದು ಬೆಳಿಗ್ಗೆ 9 ಗಂಟೆಗೆ ನಗರದ ಸನ್ಮಾರ್ಗ ಪದವಿ ಮಹಾವಿದ್ಯಾಲಯದಲ್ಲಿ ಏರ್ಪಡಿಸಲಾಗಿದೆ.



ಸ್ಪರ್ಧೆಗಳ ವಿವರ: ಸಾಂಸ್ಕೃತಿಕ ಸ್ಪರ್ಧೆ–ಜನಪದ ನೃತ್ಯ (ತಂಡ) (10 ಜನ ಸ್ಪರ್ಧಾಳುಗಳು)–ಸ್ಪರ್ಧಾ ಸಮಯ 15 ನಿಮಿಷ, ಜನಪದ ಗೀತೆ (ತಂಡ) ಪ್ರಾದೇಶಿಕ ಭಾಷೆ (10 ಜನ ಸ್ಪರ್ಧಾಗಳುಗಳು)–ಸ್ಪರ್ಧಾ ಸಮಯ 7 ನಿಮಿಷ, ಕಥೆ ಬರೆಯುವುದು (ವೈಯಕ್ತಿಕ–1000 ಪದಗಳಿಗೆ ಮೀರದಂತೆ) ಕನ್ನಡ/ ಆಂಗ್ಲ/ ಹಿಂದಿ ಭಾಷೆಯಲ್ಲಿ–ಸ್ಪರ್ಧಾ ಸಮಯ 60 ನಿಮಿಷ, ಚಿತ್ರಕಲೆ (ವೈಯಕ್ತಿಕ– ಎ 3 ಅಳತೆ) 90 ನಿಮಿಷ, ಘೋಷಣೆ (ವೈಯಕ್ತಿಕ ಸ್ಪರ್ಧೆ) ಆಂಗ್ಲ /ಹಿಂದಿ ಭಾಷೆಯಲ್ಲಿ ಇರಬೇಕು. ಸ್ಪರ್ಧಿಗಳು ಸಿದ್ಧಪಡಿಸಿಕೊಂಡಿರುವ ಆಯ್ದ ವಿಷಯಗಳ ಬಗ್ಗೆ 7 ನಿಮಿಷಗಳ ಭಾಷಣ ಮಾಡಬೇಕು–ಸ್ಪರ್ಧಾ ಸಮಯ 7 ನಿಮಿಷ, ಕವಿತೆ ಬರೆಯುವುದು (ವೈಯಕ್ತಿಕ–1000 ಪದಗಳಿಗೆ ಮೀರದಂತೆ) ಕನ್ನಡ/ ಆಂಗ್ಲ / ಹಿಂದಿ ಭಾಷೆಯಲ್ಲಿ–ಸ್ಪರ್ಧಾ ಸಮಯ 90 ನಿಮಿಷ.

ಇನೋವೇಷನ್ ಟ್ರ್ಯಾಕ್: ಎಕ್ಸಿಬಿಷನ್ ಆಫ್ ಸೈನ್ಸ್ ಮೇಳ (ಗುಂಪು) ರಾಜ್ಯ ಮಟ್ಟದವರಗೆ ಮಾತ್ರ ಆಯೋಜಿಸಲಾಗುವುದು.

ಜಿಲ್ಲಾ ಮಟ್ಟದ ಯುವ ಜನೋತ್ಸವ ಕಾರ್ಯಕ್ರಮದಲ್ಲಿ 15ರಿಂದ 29 ವರ್ಷ ವಯೋಮಾನದೊಳಗಿನ ಯುವಜನರನ್ನು ಮಾತ್ರ ಆಧಾರ್ ಕಾರ್ಡ್ ಅಥವಾ ಅಧಿಕೃತ ಜನ್ಮ ದಾಖಲೆಗಳನ್ನು ಆಧರಿಸಿ ಆಯ್ಕೆ ಪರಿಗಣಿಸಲಾಗುವುದು. ಭಾಗವಹಿಸುವ ಸ್ಪರ್ಧಾಳುಗಳು ಗದಗ ಜಿಲ್ಲೆಯವರಾಗಿರಬೇಕು ಅಥವಾ ಅನ್ಯ ಜಿಲ್ಲೆಯವರು ಭಾಗವಹಿಸಿದಲ್ಲಿ ಗದಗ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವ/ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಸಂಸ್ಥೆಯಿಂದ ಗುರುತಿನ ಚೀಟಿ/ದೃಢೀಕರಣ ಪತ್ರ ಸಲ್ಲಿಸೇಕು. ಭಾಗವಹಿಸುವ ಸ್ಪರ್ಧಾಳುಗಳಿಗೆ ಯಾವುದೇ ರೀತಿಯ ಪ್ರವಾಸ ಭತ್ಯೆ ನೀಡಲಾಗುವುದಿಲ್ಲ. ಮಧ್ಯಾಹ್ನ ಲಘು ಉಪಹಾರದ ವ್ಯವಸ್ಥೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ– ಗದಗ, ದೂರವಾಣಿ ಸಂಖ್ಯೆ–08372–238345 ಸಂಪರ್ಕಿಸಬಹುದಾಗಿದೆ.

> ರಾಷ್ಟ್ರ ಮಟ್ಟದ ಯುವಜನೋತ್ಸವದಲ್ಲಿ ಸತತ ಮೂರು ವರ್ಷಗಳು ಭಾಗವಹಿಸಿದ್ದು ಅಥವಾ ಒಂದು ಬಾರಿ ಪದಕ ಪಡೆದಿದ್ದರೂ ಅಂತಹ ಯುವ ಜನರು ಭಾಗವಹಿಸುವಂತಿಲ್ಲ. ತೀರ್ಪುಗಾರರ ತೀರ್ಮಾನವೇ ಅಂತಿಮವಾಗಿರುತ್ತದೆ. ಸನ್ಮಾರ್ಗ ಪದವಿ ಪೂರ್ವ ಕಾಲೇಜು, ಮುಂಡರಗಿ ರಸ್ತೆ, ಗದಗ ಇಲ್ಲಿ ನೇರವಾಗಿ ಅ. 25ರಂದು ಬೆಳಿಗ್ಗೆ 10 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ಅವಕಾಶ ಒದಗಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಆಯೋಜಿಸುವ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದವರಿಗೆ ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದು. ರಾಜ್ಯ ಮಟ್ಟಕ್ಕೆ ಪ್ರಥಮ ಸ್ಥಾನ ಪಡೆದವರನ್ನು ಮಾತ್ರ ಕಳುಹಿಸಿಕೊಡಲಾಗುವುದು.

# ಅಧಿಕಾರಿಗಳನ್ನು ಗೌರವದಿಂದ ಕಾಣಬೇಕು




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಗ್ರಾಮಗಳು ಅಭಿವೃದ್ಧಿ ಹೊಂದಲು ಪಿಡಿಓಗಳ ಕೊಡುಗೆ ಅಪಾರ ಎಂದು ಯಲಿಶಿರೂರ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಂಜುನಾಥ ಯಲಿ ಹೇಳಿದರು.

ಅವರು ಯಲಿಶಿರೂರ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಜೋಸ್ನಾ ಸಿ.ಎಚ್. ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಅವರನ್ನು ಸನ್ಮಾನಿಸಿ ಮಾತನಾಡಿ, ಗ್ರಾಮಗಳು ಅಭಿವೃದ್ಧಿ ಹೊಂದಲು ರಾಜ್ಯ ಹಾಗೂ ಕೇಂದ್ರ ಸರಕಾರ ಸಾಕಷ್ಟು ಯೋಜನೆಗಳನ್ನು ರೂಪಿಸುತ್ತವೆ. ಅವುಗಳನ್ನು ಜಾರಿಗೊಳಿಸಲು ಪಿಡಿಓಗಳ ಕೊಡುಗೆ ಅಪಾರವಾಗಿರುತ್ತದೆ. ಆ ನಿಟ್ಟಿನಲ್ಲಿ ನಮ್ಮ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಯಾಗಿ ಮೂರು ವರ್ಷಗಳ ಕಾಲ ಗ್ರಾಮೀಣ ಜನರ ಬದುಕು ಹಸನಾಗಲು ಶ್ರಮಿಸಿದ ಪಿಡಿಓ ಜೋಸ್ನಾ ಸಿ.ಎಚ್ ಅವರ ಕಾರ್ಯ ಶ್ಲಾಘನೀಯ ಎಂದರು.

ಗ್ರಾ.ಪಂ ಸದಸ್ಯ ಚಂದ್ರಶೇಖರ ಕಪ್ಪತ್ತನವರ ಮಾತನಾಡಿ, ನಮ್ಮ ಗ್ರಾ.ಪಂ ಪಿಡಿಓ ಜೋಸ್ನಾ ಸಿ.ಎಚ್ ಉತ್ತಮ ಅಧಿಕಾರಿಯಾಗಿ ಮೂರು ವರ್ಷಗಳ ಕಾಲ ಉತ್ತಮ ಸೇವೆ ನೀಡಿ ಲಿಂಗದಾಳ ಗ್ರಾಮ ಪಂಚಾಯತಿಗೆ ವರ್ಗಾವಣೆ ಹೊಂದಿದ್ದು, ಇಂತಹ ಅಧಿಕಾರಿಗಳು ಇದ್ದಲ್ಲಿ ಗ್ರಾಮಗಳು ಅಭಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ. ಅಧಿಕಾರಿಗಳನ್ನು ಗೌರವದಿಂದ ಕಾಣಬೇಕು ಎಂದರು.

ಉಪಾಧ್ಯಕ್ಷೆ ಅಲ್ಲಾಬಿ ನದಾಫ್, ಸದಸ್ಯರಾದ ರಾಜೇಶ್ವರಿ ಕೋಟಗಿ, ಪರಶುರಾಮ ಹೂಗಾರ, ಕವಿತಾ ಹೊನ್ನಪ್ಪನವರ, ಶರಣಪ್ಪ ಡೋಣಿ, ಶಿವಪುತ್ರಪ್ಪ ಭರಮನಾಯ್ಕರ, ಶಿವಯ್ಯ ಮನಿಗೇನಿ, ಮುದುಕಪ್ಪ ಮುಳಗುಂದ, ಪಾರ್ವತವ್ವ ಕಲ್ಯಾಣಿ, ನಾಗಮ್ಮ ಕುರ್ತಕೋಟಿ, ಶೇಖಪ್ಪ ಕಟ್ಟಿಮನಿ, ಚನ್ನಬಸವ್ವ ದಂಡಿನ, ಪಾಂಡಪ್ಪ ರಾಮಗೇರಿ, ರೇಣವ್ವ ಪ್ಯಾಟಿ, ನೀಲಪ್ಪ ಮಾಲಿಂಗಪೂರ, ಮಂಜುನಾಥ ಭಜಂತ್ರಿ, ರೇಣವ್ವ ಡಂಬ್ರಳ್ಳಿ, ಯಲ್ಲವ್ವ ವಡ್ಡರ, ಪ್ರಕಾಶ ಬೋರಣ್ಣವರ ಸೇರಿದಂತೆ ಗ್ರಾಮ ಪಂಚಾಯಿತಿಯ ಸರ್ವ ಸಿಬ್ಬಂದಿಗಳು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka